# ನಮ್ಮ ಜನ NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 75 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 28–09–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 75 | Title- Code: KARKAN 28269 | Chitradurga | Date: 28-09-2023 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಎಸ್.ಸಿ.ಪಿ, ಟಿ.ಎಸ್.ಪಿ ಯೋಜನೆ ಸೌಲಭ್ಯವನ್ನು ಸಕಾಲದಲ್ಲಿ ಅರ್ಹ ಫಲಾನುಭವಿಗಳಿಗೆ ತಲುಪಿಸಿ 2

ಶಿಕ್ಷಕರ ಸಮಸ್ಯೆಗಳ ಬಗ್ಗೆ ಸಿಎಂ ಜತೆ ಚರ್ಚೆ: ಸಚಿವ ಮಧುಬಂಗಾರಪ್ಪ 3

ಪರಿಸರ, ಪ್ರವಾಸಿ ತಾಣಗಳ ಸ್ವಚ್ಚತೆಗೆ ಆದ್ಯತೆ ನೀಡಿ: ಡಿಸಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ವಿದ್ಯುತ್ ಶಾಕ್ ಸ್ಥಳದಲ್ಲೆ ರೈತ ಸಾವು

ಹೊಸದುರ್ಗ:ತನ್ನ ಜಮೀನಿನಲ್ಲಿ ಹೊಲ ಹೂಳುತಿದ್ದ ಸಂಧರ್ಬದಲ್ಲಿ ವಿದ್ಯುತ್ ಹರಿದು ರೈತನೋರ್ವ ಸಾವನ್ನಪ್ಪಿರುವ ಘಟನೆ ತಾಲೂಕಿನ ಹೊಸಕುಂದೂರು ಗ್ರಾಮದ ಜಮೀನೊಂದರಲ್ಲಿ ಮಂಗಳವಾರ ಮಧ್ಯಾಹ್ನ ಸಂಭವಿಸಿದೆ. ಮೃತ ರೈತನನ್ನ ತಾಲೂಕಿನ ಬಾಗೂರು ಸಮೀಪವಿರುವ ಹೊಸ ಕುಂದೂರು ಗ್ರಾಮದ ಭದ್ರಪ್ಪ ಎಂಬುವವರ ಪುತ್ರ ರಾಜಪ್ಪ (53) ಎಂದು ತಿಳಿದು ಬಂದಿದ್ದು ಈತ ಮಂಗಳವಾರ ತನ್ನ ಜಮೀನಿನಲ್ಲಿ ಬೇಸಾಯ ಹೂಡಲು ಎತ್ತುಗಳ ಸಮೇತ ಹೊಲಕ್ಕೆ ಹೋಗಿದ್ದು ಹೋಲವನ್ನ ಜಮೀನನ್ನು ಹೂಳುತಿದ್ದ ಸಂಧರ್ಬದಲ್ಲಿ ಆಕಸ್ಮಿವಾಗಿ ಬದುವಿಗೆ ಹಾಕಲಾಗಿದ್ದ ತಂತಿ ಕಂಬವನ್ನ ಮಟ್ಟಿದಾಗ ಈ ಘಟನೆ ಸಂಭವಿಸಿದ್ದು ತಂತಿ ಕಂಬಕ್ಕೆ ಕಟ್ಟಲಾಗಿದ್ದ ಮೈನ್ಸ್ ವೈರ್ ಸ್ಕಿನ್ ಆಗಿದ್ದು ಅದನ್ನು ಮಟ್ಟಿದ ಪರಿಣಾಮ ಈ ಘಟನೆ ಸಂಭವಿಸಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕಟರಣ ದಾಖಲಾಗಿದೆ.

### ನೀರಿನ ಪೈಪ್‌ಲೈನ್ ದುರಸ್ಥಿಗೆ ಮನವಿ

**ಚಿತ್ರದುರ್ಗ:** ಚಿತ್ರದುರ್ಗ ನಗರಸಭೆ ವ್ಯಾಪ್ತಿಯಲ್ಲಿ ಚರಂಡಿ ಮೂಲಕ ಹಾದು ಹೋಗಿರುವ ಕುಡಿಯುವ ನೀರು ಸರಬರಾಜು ನಳದ ಪೈಪ್‌ಲೈನ್‌ಗಳ ದುರಸ್ಥಿ ಹಾಗೂ ಸ್ಥಳಾಂತರಿಸಿಕೊಳ್ಳುವಂತೆ ನಗರಸಭೆ ಪೌರಾಯುಕ್ತರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಚಿತ್ರದುರ್ಗ ನಗರಸಭೆ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸರಬರಾಜು ಪೈಪ್‌ಲೈನ್‌ಗಳು ಚರಂಡಿ ಮೂಲಕ ಹಾದುಹೋಗಿರುವುದನ್ನು ಈಗಾಗಲೇ ನಗರಸಭೆ ವತಿಯಿಂದ ತೆರವುಗೊಳಿಸಲಾಗಿರುತ್ತದೆ. ಆದರೂ ಸಹ ಕೆಲವೊಂದು ಪ್ರದೇಶಗಳಲ್ಲಿ ಕುಡಿಯುವ ನೀರಿನ ಪೈಪ್‌ಲೈನ್‌ಗಳು ಚರಂಡಿ ಮೂಲಕ ಹಾದುಹೋಗಿರುವ ವರದಿಯಾಗಿರುತ್ತದೆ. ಆದ್ದರಿಂದ ಸಾರ್ವಜನಿಕರು ತಮ್ಮ ನಳಸಂಪರ್ಕದ ಪೈಪ್‌ಲೈನ್ ಚರಂಡಿ ಮೂಲಕ ಹಾದುಹೋಗಿದ್ದಲ್ಲಿ ಅವುಗಳನ್ನು ಸ್ಥಳಾಂತರಿಸಿಕೊಳ್ಳಬೇಕು. ನಳ ಸಂಪರ್ಕದ ಪೈಪ್ ಚರಂಡಿ ಮೇಲ್ಭಾಗದಲ್ಲಿ ಇದ್ದಲ್ಲಿ ಹೆಚ್ಚುವರಿ ಕೇಸಿಂಗ್ ಪೈಪ್ ಅಳವಡಿಸಿಕೊಂಡು ಕಾಂಕ್ರೀಟ್‌ನಿಂದ ತುಂಬಿ ಚರಂಡಿ ನೀರು ಕುಡಿಯುವ ನೀರಿನೊಂದಿಗೆ ಸೇರಿ ಕಲುಷಿತಗೊಳ್ಳದಂತೆ ಮುಂಜಾಗ್ರತೆ ಕ್ರಮ ವಹಿಸಿಕೊಳ್ಳಬೇಕು. ಸಾರ್ವಜನಿಕರು ತಮ್ಮ ಮನೆಯ (ನೀರಿನ ತೊಟ್ಟಿ) ಸಂಪ್‌ಗಳನ್ನು ಕಾಲಕಾಲಕ್ಕೆ ಸ್ವಚ್ಛಗೊಳಿಸಲು ತಿಳಿಸಿದೆ.

ಪೈಪ್‌ಲೈನ್ ದುರಸ್ಥಿಗೆ ಸಂಬಂಧಿಸಿದಂತೆ 1 ರಿಂದ 6 ನೇ ವಾರ್ಡ್ ಹೆಚ್.ಮಂಜುನಾಥ (9113665493), 7 ರಿಂದ 16 ವಾರ್ಡ್ ಮೊಹಮ್ಮದ್ ಖೈಸರ್ (9008335184), 17 ರಿಂದ 19 ವಾರ್ಡ್ ಆರೀಫ್‌ವುಲ್ಲ ಎಸ್.ಎಂ (9738804480), 20 ರಿಂದ 24 ವಾರ್ಡ್ ಚಿತ್ರಪ್ಪ (9972372914), 25 ರಿಂದ 29 ವಾರ್ಡ್ ಚೆನ್ನಪ್ಪ (9902297069), 30 ರಿಂದ 35 ವಾರ್ಡ್ ಆರ್.ನವೀನ್ (8310414199) ಆಪರೇಟರ್‌ಗಳನ್ನು ಸಂಪರ್ಕಸಬಹುದು ಎಂದು ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

### ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತ ಉಪಕರಣ: ಅರ್ಜಿ ಆಹ್ವಾನ

**ಚಿತ್ರದುರ್ಗ:** 2023–24ನೇ ಸಾಲಿನ ಜಿಲ್ಲಾ ಉದ್ಯಮ ಕೇಂದ್ರ ಯೋಜನೆಯಡಿ ಸ್ವ ಉದ್ಯೋಗ ಕೈಗೊಳ್ಳಲು ಆರ್ಥಿಕವಾಗಿ ಹಿಂದುಳಿದ ಗ್ರಾಮೀಣ ಭಾಗದ ಮಹಿಳಾ ಫಲಾನುಭವಿಗಳಿಗೆ ಪ್ರತಿ ಗಾಮ ಪಂಚಾಯತ್‌ಗೆ ಒಟ್ಟು 2 ಹೊಲಿಗೆ ಯಂತ್ರಗಳನ್ನು ಹಾಗೂ ಗ್ರಾಮೀಣ ಭಾಗದ ವೃತ್ತಿ ನಿರತ ಕುಶಲಕರ್ಮಿಗಳಿಗೆ ಉಚಿತ ಉಪಕರಣ ಸರಬರಾಜು ಯೋಜನೆಯಡಿ ಪ್ರತಿ ಗ್ರಾಮ ಪಂಚಾಯತ್‌ಗೆ ಒಟ್ಟು 1 ಬಡಗಿ ವೃತ್ತಿಯ ಸುಧಾರಿತ ಉಪಕರಣಗಳನ್ನು ಉಚಿತವಾಗಿ ವಿತರಿಸಲು ಗ್ರಾಮಾಂತರ ಕೈಗಾರಿಕೆ ವಿಭಾಗದ ಕಚೇರಿಯಿಂದ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 3 ರಿಂದ ನವೆಂಬರ್ 15 ರವರೆಗೆ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದು. ಅರ್ಹ ಫಲಾನುಭವಿಗಳನ್ನು ಸಂಬಂಧಿಸಿದ ಗ್ರಾಮ ಪಂಚಾಯತ್‌ಗಳ ಗ್ರಾಮ ಸಭೆಯ ಮೂಲಕ ಆಯ್ಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯತ್‌ಗಳನ್ನು ಸಂಪರ್ಕಿಸಬಹುದು ಎಂದು ಗ್ರಾಮಾಂತರ ಕೈಗಾರಿಕಾ ವಿಭಾಗದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್‌ಸಿಪಿ, ಟಿಎಸ್‌ಪಿ ಪ್ರಗತಿ ಪರಿಶೀಲನಾ ಸಭೆ

# ವಿವಿಧ ಯೋಜನೆಗಳಡಿ ಫಲಾನುಭವಿಗಳ ಆಯ್ಕೆ ಪಾರದರ್ಶಕವಾಗಿರಲಿ: ದಿವ್ಯಪ್ರಭು

» **ಚಿತ್ರದುರ್ಗ**

ಸರ್ಕಾರದ ವಿವಿಧ ಇಲಾಖೆಗಳ ಮೂಲಕ ಅನುಷ್ಠಾನಗೊಳಿಸಲಾಗುವ ನಾನಾ ಯೋಜನೆಗಳಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡಲಾಗುವ ಸೌಲಭ್ಯಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಹಾಗೂ ತ್ವರಿತವಾಗಿ ಸೌಲಭ್ಯ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರದಂದು ಏರ್ಪಡಿಸಲಾದ ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಿಲ್ಲೆಯ ವಿವಿಧ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿ ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಯಡಿ ಪ್ರೋತ್ಸಾಹಧನ ನೀಡಿಕೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ನೀಡಲು ಇದುವರೆಗೂ ಫಲಾನುಭವಿಗಳ ಆಯ್ಕೆ ಮಾಡದಿರುವ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಜಿಲ್ಲಾಧಿಕಾರಿಗಳು, ಜಿಲ್ಲೆಯ ಎಲ್ಲ ನಗರ, ಸ್ಥಳೀಯ ಸಂಸ್ಥೆಗಳು ಎಸ್‌ಸಿಪಿ, ಟಿಎಸ್‌ಪಿ ಯೋಜನೆಗೆ ಸಂಬಂಧಿಸಿದ ಎಲ್ಲ ಕಾರ್ಯಕ್ರಮಗಳಡಿ ಅರ್ಹ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ನಿಯಮಾನುಸಾರ ಪೂರ್ಣಗೊಳಿಸಿ, ಸವಲತ್ತು ವಿತರಣೆ ಮಾಡಬೇಕು, ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಅದೇ ರೀತಿ ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಯಡಿ ನಗರ, ಪಟ್ಟಣಗಳಲ್ಲಿ ವಿವಿಧ ರಸ್ತೆ, ಚರಂಡಿ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಕೂಡ ಪೂರ್ಣಗೊಳಿಸಬೇಕಿದ್ದು, ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸದಿದ್ದಲ್ಲಿ ಶಿಸ್ತು ಕ್ರಮಕ್ಕೆ ಶಿಫಾರಸು ಮಾಡಲಾಗುವುದು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.ಪೌರಕಾರ್ಮಿಕರಿಗೆ ಕಾಲಕಾಲಕ್ಕೆ ವೇತನ ಪಾವತಿಯಾಗದಿರುವ ಬಗ್ಗೆ ದೂರುಗಳು ಕೇಳಿಬರುತ್ತಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಲಾಗುವುದು. ಪೌರಕಾರ್ಮಿಕರಿಗೆ ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ನೌಕರ ವರ್ಗದವರಿಗೆ ಪ್ರತಿ ತಿಂಗಳು ಸರಿಯಾಗಿ ವೇತನ ನೀಡಬೇಕು, ಅನಗತ್ಯ ವಿಳಂಬ ಮಾಡುವುದನ್ನು ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.ಚಿತ್ರದುರ್ಗ ನಗರಸಭೆ ವತಿಯಿಂದ ಪೌರಕಾರ್ಮಿಕರ ವಿಶ್ರಾಂತಿ ಕೊಠಡಿ ನಿರ್ಮಾಣ ಕೈಗೊಳ್ಳಬೇಕಾಗಿದ್ದು, ಇದುವರೆಗೂ ಸ್ಥಳ ಗುರುತಿಸಿಲ್ಲ, ಹೀಗಾಗಿ ಕೂಡಲೆ ಸ್ಥಳ ಗುರುತಿಸಿ ನಿಗದಿತ ಅನುದಾನದಲ್ಲಿ ಉತ್ತಮವಾಗಿ ಪೌರಕಾರ್ಮಿಕರ ವಿಶ್ರಾಂತಿ ಕೊಠಡಿ ನಿರ್ಮಿಸಬೇಕು, ಈ ಕುರಿತ ಪ್ರಕ್ರಿಯೆ ಕೂಡಲೆ ಪ್ರಾರಂಭಿಸುವಂತೆ ಜಿಲ್ಲಾಧಿಕಾರಿಗಳು ನಗರಸಭೆ ಪೌರಾಯುಕ್ತರಿಗೆ ಸೂಚನೆ ನೀಡಿದರು.

ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಕಾರ್ಮಿಕ ಇಲಾಖೆಗಳು ಸೇರಿದಂತೆ ವಿವಿಧ ಇಲಾಖೆಗಳು ತಮ್ಮ ಇಲಾಖೆಗಳಡಿ ಕೈಗೊಳ್ಳುವ ಐಇಸಿ ಕಾರ್ಯಕ್ರಮಗಳಡಿ ಕೈಗೊಳ್ಳುವ ಚಟುವಟಿಕೆಗಳಲ್ಲಿ ಪರಿಶಿಷ್ಟರ ಮೇಲಿನ ದೌರ್ಜನ್ಯ ತಡೆ ಕುರಿತಂತೆ ಹಾಗೂ ಕಾಯ್ದೆಯ ಬಗ್ಗೆಯೂ ವಿಷಯಗಳನ್ನು ಸೇರ್ಪಡೆಗೊಳಿಸಿಕೊಂಡು ಪ್ರಚಾರ ಕಾರ್ಯಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಎಸ್‌ಸಿಪಿ ಹಾಗೂ ಟಿಎಸ್‌ಪಿ ಯೋಜನೆಗಳಡಿ ವಿವಿಧ ಇಲಾಖೆಗಳಿಂದ ಆಗಿರುವಪ್ರಗತಿಯನ್ನುಇದೇಸಂದರ್ಭದಲ್ಲಿ ಪರಿಶೀಲಿಸಲಾಯಿತು, ಅಲ್ಲದೆ ಎಲ್ಲ ಇಲಾಖೆಗಳು ನಿಗದಿತ ಕಾಲಮಿತಿಯೊಳಗೆ ಎಸ್‌ಸಿಪಿ, ಟಿಎಸ್‌ಪಿ ಯೋಜನೆಯಡಿ ಒದಗಿಸಲಾಗುವ ಅನುದಾನವನ್ನು ಉದ್ದೇಶಿತ ಯೋಜನೆಗಳಿಗೆ ಖರ್ಚು ಮಾಡುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಸಾಲ ಮಾಡಿ ಮದುವೆ ಮಾಡುವುದು ಅನಾರೋಗ್ಯಕಾರಿ

### ವ್ಯವಸಾಯಕ್ಕೆಂದು ಸಾಲ ಮಾಡಿ ಮದುವೆ ಮಾಡುವುದನ್ನು ನಿಲ್ಲಿಸಿ: ಮುಖ್ಯಮಂತ್ರಿ ಸಿದ್ದರಾಮಯ್ಯ

» **ಚಾಮರಾಜನಗರ**

ಸಾಲ ಮಾಡಿ ಅದ್ದೂರಿ ಮದುವೆ ಮಾಡುವುದು ಅನಾರೋಗ್ಯಕಾರಿ.

ವ್ಯವಸಾಯಕ್ಕೆಂದು ಸಾಲ ಮಾಡಿ ಮದುವೆ ಮಾಡುವುದನ್ನು ನಿಲ್ಲಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ದೇವಸ್ಥಾನದ ರಂಗಮಂದಿರದ ಆವರಣದಲ್ಲಿ ಆಯೋಜಿಸಿದ್ದ ಸಾಮೂಹಿಕ ಸರಳ ವಿವಾಹದಲ್ಲಿ ಪಾಲ್ಗೊಂಡು ಮಾತನಾಡಿದರು.



ಬಡವರು ಮತ್ತು ಮಧ್ಯಮ ವರ್ಗದವರ ಪಾಲಿಗೆ ಅದ್ದೂರಿ ಮದುವೆಗಳು ಬಹಳ ದೊಡ್ಡ ಹೊರೆಯಾಗುತ್ತವೆ. ಜೀವನ ಪರ್ಯಂತ ಸಾಲ ತೀರಿಸುತ್ತಾ ಕೊರಬೇಕಾಗುತ್ತದೆ. ಆದ್ದರಿಂದ ಸರಳ ಮತ್ತು ಸಾಮೂಹಿಕ ವಿವಾಹಗಳು ಹೆಚ್ಚೆಚ್ಚು ನಡೆಯಬೇಕು ಎಂದರು. ಮಹದೇಶ್ವರನ ಬೆಟ್ಟ ಅಧ್ಯಾತ್ಮಿಕ ಮಹತ್ವ ಇರುವ ಪುಣ್ಯ ಸ್ಥಳ. ಶೂದ್ರರು, ಶ್ರಮಿಕರು, ಬಡವರು, ಎಲ್ಲಾ ಜಾತಿಯವರ ಅಧ್ಯಾತ್ಮಿಕ ಕೇಂದ್ರವಾಗಿದೆ. ಈ ಕಾರಣಕ್ಕೇ ನನಗೆ ಈ ಕ್ಷೇತ್ರದ ಬಗ್ಗೆ ಅತ್ಯಂತ ಶ್ರದ್ದೆ ಮತ್ತು ಗೌರವ ಇದೆ. ನಾನು ಮೊದಲ ಬಾರಿ ಮುಖ್ಯಮಂತ್ರಿಯಾದಾಗ ಮಲೈ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ ರಚಿಸಿದೆ. ಈಗ ಪ್ರಾಧಿಕಾರದ ಆದಾಯವೂ ಹೆಚ್ಚಾಗಿದೆ.


ಪುಟ 3


# ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಕರೆತರಲು ಆಂದೋಲನ: ಡಿಸಿ ದಿವ್ಯಪ್ರಭು

**ಚಿತ್ರದುರ್ಗ:** ಶಾಲೆಯಿಂದ ಹೊರಗುಳಿದ ಮಕ್ಕಳ ಕುರಿತು ವಿಶೇಷವಾಗಿ ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳಲ್ಲಿ ಸಮೀಕ್ಷೆ ಕೈಗೊಳ್ಳಬೇಕು. ಮಕ್ಕಳು ಶಾಲೆಯಿಂದ ಹೊರಗುಳಿಯಲು ನಿಖರ ಕಾರಣಪತ್ತೆ ಹಚ್ಚಿ, ಪರಿಹಾರ ಕ್ರಮಗಳನ್ನು ಕೈಗೊಂಡು ಮಕ್ಕಳನ್ನು ಶಾಲೆಗೆ ಕರೆ ತರಲು ಆಂದೋಲನ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬುಧವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ 2023ನೇ ಸಾಲಿನ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ದೌರ್ಜನ್ಯ ಪ್ರತಿಬಂಧ ಕಾಯ್ದೆ–1995 ಅಡಿ ಜರುಗಿದ 3ನೇ ತ್ರೈಮಾಸಿಕ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ 271 ಮಕ್ಕಳು ಶಾಲೆಯಿಂದ ಹೊರಗುಳಿದಿರುವುದು ಕಳವಳಕಾರಿ ಅಂಶವಾಗಿದೆ. ಇದರಲ್ಲಿ 40 ಮಕ್ಕಳು ಶಾಲೆಗೆ ದಾಖಲು ಆಗದೇ ಬಿಟ್ಟು ಹೋಗಿದಾರೆ.


ಪುಟ 2


## ಪ್ರಮುಖ ಸುದ್ದಿ

### ತಿಂಗಳಿಂದ ವಿಲೇವಾರಿ ಆಗದ ಬೃಹತ್ ಮರಗಳು ಗ್ರಾಹಕರ ಬೇಸರ

# ಬೆಸ್ಕಾಂ ಮುಂದೆ ಮರಗಳ ಮಾರಣ ಹೋಮ

» **ನಾಗತಿಹಳ್ಳಿಮಂಜುನಾಥ್**

ಹೊಸದುರ್ಗ: ಪಟ್ಟಣದ ಕಂದಾಯ ಇಲಾಖೆ ಮತ್ತು ಬೆಸ್ಕಾಂ ಮುಂದೆ ದಷ್ಟ ಪುಷ್ಟವಾಗಿ ಸುಮಾರು ವರ್ಷಗಳಿಂದ ಬೃಹದಾಕಾರವಾಗಿ ಬೆಳೆದಿದ್ದ ನೀಲಗಿರಿ ಮರಗಳನ್ನು ರಾಜ್ಯ ಹೆದ್ದಾರಿ ನಿರ್ಮಿಸುವ ಸಲುವಾಗಿ ನಿರ್ಭೀತಿಯಿಂದ ಕಡಿದು ನೀತಿ ನಿಯಮ ಇಲ್ಲದಂತೆ ಸಾರ್ವಜನಿಕರು ಪ್ರಮುಖವಾಗಿ ಓಡಾಡುವ ಜಾಗಗಳಲ್ಲಿ ನೆಲಕ್ಕೆ ಉರುಳಿಸಲಾಗಿದೆ.





ಈ ಘನಂಧಾರಿ ಕಾರ್ಯ ಯಾವ ಇಲಾಖೆಯಿಂದ ನಡೆದಿದೆ ಎಂಬುದೇ ನಿಗೂಢ! ಈ ರೀತಿ ಕಡಿದು ಹಾಕಿ ಒಂದು ತಿಂಗಳಾಯಿತು.

ಇದರಿಂದ ಬೆಸ್ಕಾಂ ಕೆಲಸಕ್ಕೆಂದು ಬರುವ ಗ್ರಾಹಕರಿಗಂತೂ ತೀರ್ವ ತೊಂದರೆಯಾಗುತ್ತಿದೆ ಇಲ್ಲಿ ಕೆಲಸ ಮಾಡುವ ನೌಕರರಿಗೂ ಕೂಡ ಅಷ್ಟೇ ತೊಂದರೆಯಾಗುತ್ತಿದೆ ಬೆಸ್ಕಾಂ ಇಲಾಖೆಯ ಆವರಣಕ್ಕೆ ಯಾವುದೇ ವಾಹನಗಳು ಬಂದು ಹೋಗದಂತಹ ಸ್ಥಿತಿ ನಿರ್ಮಾಣವಾಗಿದೆ.

ಆದರೂ ಮರಗಳ ವಿಲೇವಾರಿ ಬಗ್ಗೆ ಯಾರೂ ಸಹಾ ಚಕಾರವೆತ್ತುತ್ತಿಲ್ಲ ಎಂಬುದು ವಿಪರ್ಯಾಸದ ಸಂಗತಿಯಾದರೆ ಇಲ್ಲಿ ಓಡಾಡುವ ಸಾರ್ವಜನಿಕರು ಮತ್ತು ಗ್ರಾಹಕರು ಬೆಸ್ಕಾಂ ಇಲಾಖೆಯನ್ನ ಶಫಿಸುತಿದ್ದಾರೆ.ಇದರಿಂದ ಯಾರೋ ಮಾಡಿರೋ ತಪ್ಪಿಗೆ ಯಾರಿಗೋ ಶಿಕ್ಷೆ ಎಂಬಂತಾಗಿದೆ.

ಇದೇ ಅವರಣದಲ್ಲಿ ಒಂದು ದೇವಾಲಯವಿದೆ ಇಲ್ಲಿಯೂ ಕೂಡ ಅದೇ ಪರುಸ್ಥಿತಿ ನಿರ್ಮಾಣವಾಗಿದೆ ದೇವಾಲಯದ ಭದ್ರತಾ ಕಟ್ಟಡದ ಕಾಂಪೌಂಡ್ ಮೇಲೆ ಬೃಹದಾಕಾರದ ಮರಗಳು ಬಿದ್ದು ಕಾಂಪೌಂಡ್ ಎಂಬುದು ಶೀಥಿಲಾವಸ್ಥೆಗೆ ತಲುಪಿದೆ ಬೆಸ್ಕಾಂ ಇಲಾಖೆಯ ಆವರಣದಲ್ಲಿ ಬೃಹದಾಕಾರವಾಗಿ ಬಿದ್ದಿರುವ ಮರಗಳನ್ನು ತಕ್ಷಣವೆ ವಿಲೇವಾರಿ ಮಾಡುವಂತೆ ಸಾರ್ವಜನಿಕರು ಬೆಸ್ಕಾಂಗೆ ಸಾಕಷ್ಟು ಭಾರಿ ದೂರಿದ್ದಾರೆ ಆದರೂ ಒಂದು ತಿಂಗಳಿಂದ ನೆಲಕ್ಕುರಿಳಿರುವ ನೀಲಗಿರಿ ಮರಗಳು ಹಾಗೆಯೇ ಮಲಗಿ ನಿದ್ರಿಸುತ್ತಿವೆ.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5500 |
| 85 ಕೆಡಿಎಂ (ಗ್ರಾಂ) | 5100 |



| ಬೆಳ್ಳಿ ಬೆಲೆ | |
|---|---|
| ಕೆಜಿ | 63500 |



# ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಕರೆತರಲು ಆಂದೋಲನ: ಡಿಸಿ ದಿವ್ಯಪ್ರಭು

» ಮೊದಲ ಪುಟದಿಂದ

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಮೀಕ್ಷೆಯಲ್ಲೂ 204 ಮಕ್ಕಳು ಶಾಲೆಯಿಂದ ಹೊರಗುಳಿದಿರುವುದು ಪತ್ತೆಯಾಗಿದೆ. ಹೀಗೆ ಶಾಲೆಯಿಂದ ಹೊರಗುಳಿದ ಮಕ್ಕಳು ಬಾಲ್ಯ ವಿವಾಹ, ಬಾಲ ಕಾರ್ಮಿಕ ಹಾಗೂ ಇತರೆ ದೌರ್ಜನ್ಯ ಪ್ರಕರಣ ಸಿಲುಕುವ ಸಂಭವಿರುತ್ತದೆ. ಇದು ಮಕ್ಕಳ ಭವಿಷ್ಯಕ್ಕೆ ಮಾರಕವಾಗಲಿದೆ. ಶಿಕ್ಷಣ ಇಲಾಖೆ ಸದ್ಯ ನಡೆಸಿರುವ ಶಾಲೆಯಿಂದ ಹೊರಗುಳಿದ ಮಕ್ಕಳ ವಿಶೇಷ ಸಮೀಕ್ಷೆ ವರದಿಯ ಜೊತೆಗೆ ಮತ್ತೊಮ್ಮೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ, ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳನ್ನು ಒಳಗೊಂಡು ಸಮೀಕ್ಷೆಯನ್ನು ಕೈಗೊಳ್ಳಬೇಕು. ಸಮೀಕ್ಷೆಯಲ್ಲಿ ಮಕ್ಕಳು ಯಾವ ಕಾರಣದಿಂದ ಶಾಲೆಯಿಂದ ಹೊರಗುಳಿದಿದ್ದಾರೆ. ಪೋಷಕರ ಸ್ಥಿತಿಗತಿ ಕುರಿತು ಸಮಗ್ರ ವರದಿಯನ್ನು ತಯಾರು ಮಾಡಬೇಕು. ಮುಖ್ಯವಾಗಿ ಇಂತಹ ಮಕ್ಕಳ ಪೈಕಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ಮಕ್ಕಳ ಸಂಖ್ಯೆ ಎಷ್ಟಿದೆ ಎಂಬುದನ್ನು ನಿಖರವಾಗಿ ಪತ್ತೆ ಹಚ್ಚಬೇಕು. ಬಡತನ, ಆರೋಗ್ಯ ಹಾಗೂ ಇತರೆ ಕಾರಣಗಳಿಂದ ಮಕ್ಕಳು ಶಾಲೆ ಬರದಿದ್ದರೆ ಈ ಸಮಸ್ಯೆಗಳನ್ನು ಪರಿಹರಿಸಲು ಎಲ್ಲಾ ಇಲಾಖೆಗಳ ಸಹಕಾರವನ್ನು ಪಡೆದುಕೊಳ್ಳಬೇಕು. ಆರೋಗ್ಯ ಸಮಸ್ಯೆ ಕಾರಣದಿಂದ ಮಕ್ಕಳು ಶಾಲೆಯಿಂದ ಹೊರಗುಳಿದರೆ ಅವರಿಗೆ ರಾಷ್ಟ್ರೀಯ ಬಾಲ್ಯ ಸ್ವಾಸ್ಥ್ಯ ಕಾರ್ಯಕ್ರಮದ ಅಡಿ ಸೂಕ್ತ ಚಿಕಿತ್ಸೆ ನೀಡಲು ಕ್ರಮಕೈಗೊಳ್ಳಬೇಕು ಎಂದರು.

ಮಕ್ಕಳಿಗೆ ಮನೆಯಲ್ಲಿ ತೊಂದರೆ ಇದ್ದರೆ ಅಂತಹವರನ್ನು ವಿದ್ಯಾರ್ಥಿ



ನಿಲಯ ಅಥವಾ ವಸತಿ ಶಾಲೆಗಳಿಗೆ ದಾಖಲಿಸಬೇಕು. ಪೋಷಕರಿಗೆ ನರೇಗಾ ದಡಿ ಉದ್ಯೋಗ, ಇತರೆ ನಿಗಮ ಹಾಗೂ ಇಲಾಖೆಗಳ ಅಡಿ ವ್ಯಾಪರ ಮಾಡಲು ಸೂಕ್ತ ಸಹಾಯಧವನ್ನು ನೀಡಬೇಕು. ಹೊರ ಜಿಲ್ಲೆ ಹಾಗೂ ಹೊರ ರಾಜ್ಯಗಳಿಗೆ ಪೋಷಕರೊಂದಿಗೆ ದುಡಿಯಲು ತೆರಳುವ ಮಕ್ಕಳನ್ನು ಕಾರ್ಮಿಕ ಇಲಾಖೆಯಿಂದ ಪತ್ತೆ ಹಚ್ಚಬೇಕು. ಇಟ್ಟಿಗೆ ಬಟ್ಟಿ ಸೇರಿದಂತೆ ಇತರೆ ಸ್ಥಳಗಳಲ್ಲಿ ಮಕ್ಕಳು ಬಾಲ ಕಾರ್ಮಿಕರಾಗಿ ದುಡಿಮೆ ಮಾಡುತ್ತಿರುವುದನ್ನು ಪತ್ತೆ ಹಚ್ಚಲು ಧಿಡೀರ್ ದಾಳಿ ನಡೆಸಬೇಕು. ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಇಲಾಖೆ ವಿದ್ಯಾರ್ಥಿ ನಿಲಯಗಳಲ್ಲಿ ಇಂತಹ ಮಕ್ಕಳಿಗೆ ಪ್ರವೇಶ ನೀಡಿ ವ್ಯಾಸಂಗಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಹೇಳಿದರು.

**ವಿದ್ಯಾರ್ಥಿ ವೇತನ ಅರ್ಜಿ ಸಲ್ಲಿಕೆಗೆ ವಿಶೇಷ ಅಭಿಯಾನ:** ಶಿಕ್ಷಣ ಹಾಗೂ ಸಮಾಜ ಕಲ್ಯಾಣ ಇಲಾಖೆ ಜೊತೆಗೂಡಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ವಿದ್ಯಾರ್ಥಿ ವೇತನಕ್ಕೆ ಹೆಚ್ಚು ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ವಿಶೇಷ ಅಭಿಯಾನವನ್ನು ಕೈಗೊಳ್ಳಬೇಕು. ಮುಖ್ಯವಾಗಿ ಖಾಸಗಿ ಶಾಲಾ ಹಾಗೂ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪಂಗಡದ ವಿದ್ಯಾರ್ಥಿಗಳ ಸಂಖ್ಯೆಯನ್ನು ಸಂಗ್ರಹಿಸಿ ಪ್ರತಿಯೊಬ್ಬ ವಿದ್ಯಾರ್ಥಿಯು ಅರ್ಜಿ ಸಲ್ಲಿಸುವಂತೆ ನೋಡಿಕೊಳ್ಳಬೇಕು. ಖಾಸಗಿ ಶಾಲೆಗಳಲ್ಲಿ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನೇಮಿಸಿ ಅರ್ಜಿ ಸಲ್ಲಿಸುವಪ್ರಕ್ರಿಯೆಯನ್ನುಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು. ಜಿ.ಪಂ. ಸಿಇಓ ಅವರು ಈ ಕುರಿತು ಶಿಕ್ಷಣ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳ ಸಭೆ ನಡೆಸುವಂತೆ ಸೂಚಿಸಿದರು.

**ದೌರ್ಜನ್ಯ ತಡೆ ಅರಿವು ಕಾರ್ಯಕ್ರಮದಲ್ಲಿ ಅಧಿಕಾರಿಗಳು ಭಾಗಿ;** ಪರಿಶಿಷ್ಟ ಜಾತಿ ಹಾಗೂ ಪಂಗಡದ ಜನಾಂಗದ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಅರಿವುಕಾರ್ಯಕ್ರಮಗಳನ್ನುಕೈಗೊಳ್ಳಬೇಕು. ಅರಿವು ಕಾರ್ಯಕ್ರಮ ನಡೆಯುವ ಸ್ಥಳ ಹಾಗೂ ದಿನಾಂಕದ ಕುರಿತು ವ್ಯಾಪಕ ಪ್ರಚಾರ ನೀಡಬೇಕು. ಜಿಲ್ಲಾಧಿಕಾರಿ, ಜಿ.ಪಂ. ಸಿಇಓ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳೂ, ತಾಲೂಕು ಮಟ್ಟದ ಅಧಿಕಾರಿಗಳೂ ಅರಿವು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು. ಗ್ರಾಮೀಣ ಪ್ರದೇಶದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಂದಾಯ ಇಲಾಖೆ ಅಧಿಕಾರಿಗಳು, ಸೇರಿದಂತೆ ಆ ಭಾಗದ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್‌ಗಳು ಅರಿವು ಕಾರ್ಯಕ್ರಮದಲ್ಲಿ ತಪ್ಪದೇ ಭಾಗವಹಿಸಬೇಕು. ಅರಿವು ಕಾರ್ಯಕ್ರಮವನ್ನು ಪರಿಣಾಮಕಾರಿ ಯಾಗಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ತಿಳಿಸಿದರು.

**14 ದೌರ್ಜನ್ಯ ಪ್ರಕರಣ ದಾಖಲು:** ಪ್ರಸಕ್ತ ತ್ರೈಮಾಸಿಕ ಅವಧಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ದೌರ್ಜನ್ಯ ಪ್ರತಿಬಂಧಕ ಕಾಯ್ದೆಯಡಿ ಜಿಲ್ಲೆಯಲ್ಲಿ ಒಟ್ಟು 14 ಪ್ರಕರಣಗಳು ದಾಖಲಾಗಿವೆ. ಇವುಗಳ ಪೈಕಿ 6 ಪ್ರಕರಣಗಳ ತನಿಖೆ ಕಾರ್ಯ ಮುಗಿದು ನ್ಯಾಯಾಲಯಕ್ಕೆ ದೋಷಾರೋಪಟ್ಟಿ ಸಲ್ಲಿಸಲಾಗಿದೆ. 8 ಪ್ರಕರಣಗಳು ತನಿಖೆ ಹಂತದಲ್ಲಿವೆ. ನೊಂದವರಿಗೆ ಸೂಕ್ತ ಪರಿಹಾರ ನೀಡಲು ಎಲ್ಲಾ ಪ್ರಕರಣಗಳ ಪ್ರಾಥಮಿಕ ವರದಿಯನ್ನು ಸಮಾಜ ಕಲ್ಯಾಣ ಇಲಾಖೆಗೆ ಕಳುಹಿಸಿಕೊಡಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಸಭೆಯಲ್ಲಿ ಮಾಹಿತಿ ನೀಡಿದರು.

**ಪರಿಹಾರ ಧನ ವಿತರಣೆ :** ಪ್ರಸಕ್ತ ತ್ರೈಮಾಸಿಕ ಅವಧಿಯಲ್ಲಿ ಒಟ್ಟು 35 ಪರಿಶಿಷ್ಟ ಜಾತಿ ಹಾಗೂಪಂಗಡದದೌರ್ಜನ್ಯಪ್ರಕರಣಗಳಲ್ಲಿ ಒಟ್ಟು 69 ಸಂತ್ರಸ್ತರಿಗೆ ಪರಿಹಾರಧನ ವಿತರಿಸಲಾಗಿದೆ. 35 ಪ್ರಕರಣಗಳಲ್ಲಿ 26 ಪರಿಶಿಷ್ಟ ಜಾತಿ ಹಾಗೂ 9 ಪರಿಶಿಷ್ಟ ವರ್ಗ ಸಂಬಂದಿಸಿದವುಗಳಾಗಿವೆ. ಆಗಸ್ಟ್ ಅಂತ್ಯದ ವೇಳೆಗೆ ಜಿಲ್ಲೆಯಲ್ಲಿ 84 ಪ್ರಕರಣಗಳು ಬಾಕಿ ಇದ್ದು, 9 ಪ್ರಕರಣಗಳು ಹೊಸದಾಗಿ ನ್ಯಾಯಲಾಯದಲ್ಲಿ ವಿಚಾರಣೆ ಬಂದಿವೆ. ಇದರಲ್ಲಿ 5 ಪ್ರಕರಣಗಳು ವಿಲೇವಾರಿ ಯಾಗಿದ್ದು 88 ಪ್ರಕರಣಗಳು ಬಾಕಿ ಇವೆ. ಪರಿಹಾರ ಧನ ವಿತರಿಸುವಲ್ಲಿ ಯಾವುದೇ ರೀತಿ ಅನುದಾನದ ಕೊರತೆ ಇಲ್ಲ ಎಂದು ಸಮಾಜ ಕಲ್ಯಾಣ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸಭೆಯಲ್ಲಿ ಮಾಹಿತಿ ನೀಡಿದರು.

**ಕವಾಡಿಗರ ಹಟ್ಟಿಯಲ್ಲಿ ನಗರ ಆರೋಗ್ಯ ಕೇಂದ್ರ ಸ್ಥಾಪನೆ ಪ್ರಸ್ತಾವನೆ :** ಕವಾಡಿಗರ ಹಟ್ಟಿಯಲ್ಲಿ ಕಲುಷಿತ ನೀರು ಸೇವನೆ ಪ್ರಕರಣದಲ್ಲಿ ಮೃತಪಟ್ಟವರ ಕುಟುಂಬದವರಿಗೆ ಮುಖ್ಯಮಂತ್ರಿ ಪರಿಹಾರ ನಿಧಿ ಹಾಗೂ ನಗರಸಭೆ ನಿಧಿಯಡಿ ತಲಾ ರೂ.10 ಲಕ್ಷ ಪರಿಹಾರ ಧನವನ್ನು ವಿತರಿಸಲಾಗಿದೆ. ಕವಾಡಿಗರ ಹಟ್ಟಿಯಲ್ಲಿ ಹೊಸದಾಗಿ ಕುಡಿಯುವ ನೀರಿನ ಘಟಕ, ಪೈಪಲೈನ್ ಸೇರಿದಂತೆ ಇತರೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ರೂ.4 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಕಾಮಗಾರಿಯೂ ಚಾಲನೆಯಲ್ಲಿದೆ. ಮೃತಪಟ್ಟ ಕುಟುಂಬದ ಅವಲಂಬಿತರಿಗೆ ಆದಿ ಜಾಂಬವ ನಿಗಮದಿಂದ ಕೃಷಿ ಭೂಮಿ ನೀಡಲು ಈಗಲಾಲೇ ಕ್ರಮ ಕೈಗೊಳ್ಳಲಾಗಿದೆ. ಕವಾಡಿಗರ ಹಟ್ಟಿಯಲ್ಲಿ ನಗರ ಆರೋಗ್ಯ ಕೇಂದ್ರ ಸ್ಥಾಪನೆಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರಿಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿ.ಪಂ.ಸಿಇಓ ಎಸ್.ಜೆ. ಸೋಮಶೇಖರ್, ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕ ಬಿ.ಆನಂದ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ, ಭಾರತಿ ಅರ್.ಬಣಕಾರ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಪಂಡಿತ್ ದೀನ್ ದಯಾಳ್ ಉಪಾಧ್ಯಾಯರ ಜನ್ಮದಿನಾಚರಣೆ




ಹೊಸದುರ್ಗ:ಪಟ್ಟಣದ ಬಿಜೆಪಿ ಪಕ್ಷದ ಕಚೇರಿಯಲ್ಲಿ ಪಂಡಿತ್ ದೀನ್ ದಯಾಳ್ ಉಪಾಧ್ಯಾಯರವರ ಜನ್ಮದಿನಾಚರಣೆಯನ್ನು ಆಚರಿಸಲಾಯಿತು ಮಂಡಲ ಅಧ್ಯಕ್ಷರಾದ ಗೂಳಿಹಟ್ಟಿ ಜಗದೀಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಬುರುಡೆ ಕಟ್ಟೆ ರಾಜೇಶ್‌ರವರು ಮಂಡಲ ಕಾರ್ಯದರ್ಶಿಗಳಾದ ಹುರುಳಿಯಲ್ಲಿ ಶಿವಕುಮಾರ್ ಮಂಡಲ ರೈತ ಮೋರ್ಚ ಅಧ್ಯಕ್ಷರಾದ ಡಿ. ಟಿ ಲಿಂಗರಾಜುರವರು ಪುರಸಭೆ ಸದಸ್ಯರಾದ ದಾಳಂಬೆ ಗಿರೀಶ್‌ರವರು ಉದ್ಯಮಿಗಳಾದ ಡಿ.ಎಸ್. ಪ್ರದೀಪ್ ರವರು ಹಾಗೂ ಮತ್ತೊಡ್‌ಮನು ಇನ್ನು ಹಲವರು ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

### ಉಚಿತ ಲ್ಯಾಪ್‌ಟಾಪ್ ಪಡೆಯಲು ಅರ್ಜಿ ಆಹ್ವಾನ

ದಾವಣಗೆರೆ: ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೊಂದಾಯಿತ ಕಾರ್ಮಿಕರ ಮಕ್ಕಳು ಪ್ರಸಕ್ತ ಸಾಲಿನಲ್ಲಿ ಪ್ರಥಮ ಹಾಗೂದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ. ದಾವಣಗೆರೆ ಉಪ ವಿಭಾಗದ ಕಾರ್ಮಿಕ ಅಧಿಕಾರಿ ಇವರ ವ್ಯಾಪ್ತಿಯಲ್ಲಿ ನೋಂದಣಿಯಾಗಿರುವ ಕಾರ್ಮಿಕರು ಈ ಸೌಲಭ್ಯವನ್ನು ಪಡೆಯಬಹುದು.

### ೯ ವರ್ಷಗಳ ಸಾಧನೆಯ ಅನಾವರಣ, ಛಾಯಾಚಿತ್ರ ಪ್ರದರ್ಶನ



ದಾವಣಗೆರೆ: ಕೇಂದ್ರ ಸಂವಹನ ಇಲಾಖೆ ಶಿವಮೊಗ್ಗ ವತಿಯಿಂದ ಹರಿಹರದಲ್ಲಿ ಸೆಪ್ಟೆಂಬರ್ 26 ರಿಂದ 28 ರ ವರೆಗೆ ಮೂರು ದಿನಗಳ ಕಾಲ ಹಮ್ಮಿಕೊಂಡಿರುವ ಕೇಂದ್ರ ಸರ್ಕಾರದ ಒಂಭತ್ತು ವರ್ಷಗಳ ಸಾಧನೆಗಳ ಛಾಯಾಚಿತ್ರ ಪ್ರದರ್ಶನ ಮತ್ತು ಪೋಷಣ್ ಮಾಸಾಚರಣೆಯನ್ನು ದಾವಣಗೆರೆ ಸಂಸದರಾದ ಜಿ.ಎಂ.ಸಿದ್ದೇಶ್ವರ ಅವರು ಉದ್ಘಾಟಿಸಿದರು.ಕೃಷಿ ಸಿಂಚಯಿ ಯೋಜನೆ, ಸಾಯಿಲ್ ಹೆಲ್ತ್ ಕಾರ್ಡ್, ಕಿಸಾನ್ ಸಮ್ಮಾನ್, ನೀಮ್ ಕೋಟೆಡ್ ಯೂರಿಯಾ, ಮೇರಿ ಮಾಠಿ ಮೇರಾ ದೇಶ್, ಏಕ ಭಾರತ ಶ್ರೇಷ್ಠ ಭಾರತ, ಆಯುಷ್ಮಾನ್ ಭಾರತ್, ಒಂದು ರಾಷ್ಟ್ರ ಒಂದು ಮಾರುಕಟ್ಟೆ, ಒಂದು ತೆರಿಗೆ, ಕೃಷಿ ನಿರ್ವಹಣೆಯಲ್ಲಿ ಪರ್ಯಾಯ ಪೋಷಕಾಂಶಗಳ ಬಳಕೆಗೆ ಉತ್ತೇಜನ ನೀಡುವ ಪಿಎಂ ಪ್ರಣಾಮ್ ಯೋಜನೆಗಳು ಗಮನ ಸೆಳೆದವು.ವಿಶೇಷವಾಗಿ ಪೋಷಣ್ ಮಾಸಾಚರಣೆ ಅಂಗವಾಗಿ ಪೋಷಕಾಂಶ ಆಹಾರ ಪದಾರ್ಥಗಳ ಪ್ರದರ್ಶನ ನಡೆಯಿತು. ಕೇಂದ್ರ ಸರ್ಕಾರದ ಮಾತೃವಂದನಾ ಯೋಜನೆಯಡಿ ಆರು ಸಾವಿರ ರೂಪಾಯಿ ಸೌಲಭ್ಯ ಪಡೆದ ನೂರಕ್ಕೂ ಅಧಿಕ ತಾಯಂದಿರು ಭಾಗವಹಿಸಿದ್ದರು.ಹರಿಹರ ಶಾಸಕ ಬಿ.ಪಿಹರೀಶ್ ಅಧ್ಯಕ್ಷತೆ ವಹಿಸಿದ್ದರು. ನಗರಸಭೆ, ಅಧ್ಯಕ್ಷರಾದ ನಿಂಬಕ್ಕ ನಿಂಗಪ್ಪ ಚಂದಾಪುರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಪೂರ್ಣಿಮಾ, ಕೇಂದ್ರ ಸಂವಹನ ಇಲಾಖೆಯ ಕ್ಷೇತ್ರ ಪ್ರಚಾರಾಧಿಕಾರಿ ಅಕ್ಷತಾ ಸಿ.ಹೆಚ್, ಲಕ್ಷ್ಮೀಕಾಂತ ಉಪಸ್ಥಿತರಿದ್ದರು.

### ಉದ್ಯೋಗ ಮೇಳದ ಸದ್ಬಳಕೆಗೆ ಡಿಸಿ ಸಲಹೆ

ದಾವಣಗೆರೆ:ಬೃಹತ್ ಉದ್ಯೋಗ ಮೇಳವನ್ನು ಅಕ್ಟೋಬರ್ ಮಾಹೆಯಲ್ಲಿ ನಗರದ ಹೈಸ್ಕೂಲ್ ಮೈದಾನದಲ್ಲಿ ನಡೆಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಬೃಹತ್ ಉದ್ಯೋಗ ಮೇಳದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕುಟುಂಬದ ಆರ್ಥಿಕ ಅಭಿವೃದ್ಧಿಗೆ ಉದ್ಯೋಗ ಎಂಬುದು ಮಹತ್ವ ಪೂರ್ಣವಾಗಿರುತ್ತದೆ. ಜಿಲ್ಲೆಯಲ್ಲಿ ಅನೇಕ ವಿದ್ಯಾವಂತ ಯುವಕ, ಯುವತಿಯರಿದ್ದು, ಉದ್ಯೋಗವಿಲ್ಲದೇ ನಿರುದ್ಯೋಗಿಗಳಾಗಿದ್ದಾರೆ. ಈ ಬೃಹತ್ ಉದ್ಯೋಗ ಮೇಳದ ಮೂಲಕ ಯುವ ಜನತೆಗೆ ಉದ್ಯೋಗವಕಾಶ ಕಲ್ಪಿಸುವುದು ಇದರ ಉದ್ದೇಶವಾಗಿದೆ ಎಂದರು.ಉದ್ಯೋಗ ಮೇಳದಲ್ಲಿ ವಿವಿಧ ಜಿಲ್ಲೆಗಳಲ್ಲಿನ ಹೆಸರಾಂತ ಗಾರ್ಮೆಂಟ್ಸ್ ಕಂಪನಿಗಳು, ಇತರೆ ಬೃಹತ್ ಕೈಗಾರಿಕೆಗಳ ಉದ್ಯಮಿಗಳು ಭಾಗವಹಿಸಲು ಆಮಂತ್ರಿಸಲಾಗುತ್ತದೆ. ಉದ್ಯೋಗ ಮೇಳದ ಬಗ್ಗೆ ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಚಾರ ಕೈಗೊಂಡು ಯುವಕ, ಯುವತಿಯರು ಮೇಳದಲ್ಲಿ ಭಾಗವಹಿಸುವಂತೆ ಹೆಚ್ಚಿನ ಪ್ರಚಾರ ಕೈಗೊಳ್ಳಲು ಸೂಚನೆ ನೀಡಿದರು.

## ಬೆಸ್ಕಾಂ ನೌಕರರ ಕುಂದುಕೊರತೆಗಳ ನಿವಾರಣೆಗೆ ಹೆಚ್ಚಿನ ಆದ್ಯತೆ

# ನೌಕರರ ಪರಿಶ್ರಮದಿಂದ ಮಾತ್ರ ಇಲಾಖೆ ಗೌರವ ಹೆಚ್ಚು: ಆರ್.ಎಚ್.ಲಕ್ಷ್ಮಿಪತಿ

» ಚಳ್ಳಕೆರೆ

ರಾಜ್ಯದ ಬೆಸ್ಕಾಂ, ಎಸ್ಕಾಂ, ಹೆಸ್ಕಾಂ ಮತ್ತು ಕೆಪಿಟಿಸಿಎಸ್ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೂ ಸಹ ನಿವೃತ್ತಿ ನಂತರ ಪಿಂಚಣಿ ಸೌಲಭ್ಯವನ್ನು ಮುಂದುವರೆಸುವಂತೆ ಸರ್ಕಾರಕ್ಕೆ ಮನವಿ ಮಾಡುವುದಾಗಿ ಕೆಪಿಟಿಸಿಎಲ್ ನೌಕರರ ಸಂಘದ ರಾಜ್ಯಾಧ್ಯಕ್ಷ, ಎಸ್ಕಾಂ ನಿರ್ದೇಶಕ ಆರ್. ಎಚ್.ಲಕ್ಷ್ಮಿಪತಿ ತಿಳಿಸಿದರು.

ಅವರು, ನಗರದ ಬೆಸ್ಕಾಂ ಕಚೇರಿಯಲ್ಲಿ ಬೆಸ್ಕಾಂ ನೌಕರರ ಸಂಘದ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಇಡೀ ರಾಜ್ಯದಲ್ಲಿ ಪ್ರವಾಸ ನಡೆಸಿ ಕೆಪಿಟಿಸಿಎಲ್ ಹಾಗೂ ಎಲ್ಲಾ ವಿಭಾಗದ ನೌಕರರಿಗೆ ಅಗತ್ಯವಿರುವ ಸೌಲಭ್ಯಗಳನ್ನು ನೀಡುವ ನಿಟ್ಟಿನಲ್ಲಿ ಸರ್ಕಾರದ ಮೇಲೆನಿರಂತರ ಒತ್ತಡ ಹೇರಲಾಗುತ್ತಿದೆ. ಕಳೆದ 2006ರ ನಂತರ ನೌಕರಿ ಪಡೆದವರಿಗೆ ಪಿಂಚಣಿ ಸೌಲಭ್ಯವಿಲ್ಲವೆಂಬ ನಿಯಮವನ್ನು ಬದಲಾವಣೆ ಮಾಡುವಂತೆ ನೌಕರರ ಸಂಘದಿಂದ ನಿರಂತರ ಒತ್ತಡಗಳು ಹೇರಲಾಗುತ್ತಿದೆ ಇದು ವಾಸ್ತವಿಕವಾಗಿ ಸತ್ಯವೂ ಹೌದು. ನಿವೃತ್ತಿ ನಂತರ ಪಿಂಚಣಿ ಸೌಲಭ್ಯವಿಲ್ಲದಿದರೆ ನೌಕರರು ಬದುಕುವುದು ಹೇಗೆ. ಈ ಬಗ್ಗೆ ಸರ್ಕಾರ ಗಂಭೀರ ಚಿಂತನೆ



ನಡೆಸಬೇಕು. ಸುಮಾರು ರಾಜ್ಯದಲ್ಲಿ ಎಂಟು ಸಾವಿರ ನೌಕರರು ಪಿಂಚಣಿ ವಂಚಿತರಾಗುತ್ತಿದ್ದು, ಅವರ ಪರವಾಗಿ ಹೋರಾಟವನ್ನು ಮುಂದುವರೆಸಲಾಗುವುದು ಎಂದರು.

ಕೇಂದ್ರ ಕಾರ್ಯಕಾರಿ ಸಮಿತಿ ಸದಸ್ಯರಾದ ಚಿದಾನಂದಸ್ವಾಮಿ ಮಾತನಾಡಿ, ಇಲಾಖೆಯಲ್ಲಿ ಹಲವಾರು ವರ್ಷಗಳಿಂದ ಬಡ್ತಿ ನೀಡುವಲ್ಲಿ ತಾರತಮ್ಯವೆಸಗಲಾಗುತ್ತಿದೆ, ಈ ಬಗ್ಗೆ ನೌಕರರು ಮೇಲಿಂದ ಮೇಲೆ ಮನವಿ ಮಾಡುತ್ತಾ ಬಂದಿದ್ದಾರೆ. ಇತ್ತೀಚಿನ ದಿನಗಳಲ್ಲಿ ಕರ್ತವ್ಯದ ಸಂದರ್ಭದಲ್ಲಿ ನೌಕರರು ಸಾವಿಗೀಡಾಗುತ್ತಿದ್ದಾರೆ. ಇದು ನೋವಿನ ಸಂಗತಿಯಾಗಿದೆ. ಈ ನಿಟ್ಟಿನಲ್ಲಿ ಮತ್ತಷ್ಟು ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಸರ್ಕಾರಕ್ಕೆ ನೌಕರರ ಪರವಾಗಿ ಮನವಿ ಮಾಡಲಾಗಿದೆ, ಜೀವ ಕಳೆದುಕೊಂಡ ಕುಟುಂಬಕ್ಕೆ ಮತ್ತಷ್ಟು ಸೌಲಭ್ಯ ಮತ್ತು ಹೆಚ್ಚಿನ ಆರ್ಥಿಕ ನೆರವು ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದೆ ಎಂದರು.

ಉಪಾಧ್ಯಕ್ಷ ಕೆ.ಬಸವರಾಜು, ಕೇಂದ್ರ ಸಮಿತಿ ಸದಸ್ಯ ಗಂಗಾಧರ, ಎಇಇ ರಾಜು, ಮೊಳಕಾಲ್ಮೂರು ಎಇಇ ಶಿವಪ್ರಸಾದ್, ಬೆಸ್ಕಾಂ ಎಸ್ಟಿ ನೌಕರರ ಸಂಘದ ಉಪಾಧ್ಯಕ್ಷ ಸಿ.ನಾಗರಾಜು, ಮಂಜುನಾಥ, ವೆಂಕಟೇಶ್, ಧನಂಜಯ ಮುಂತಾದವರು ಉಪಸ್ಥಿತರಿದ್ದರು.

## ನ್ಯಾಯ ಒದಗಿಸಲು ಸಂಘಟನೆ ಮೂಲಕ ಜಾಗೃತಿ: ವೆಂಕಟೇಶ್



**ಚಳ್ಳಕೆರೆ:** ಕಳೆದ ಹಲವಾರು ದಶಕಗಳಿಂದ ಸಂವಿಧಾನ ಬದ್ದವಾಗಿ ಮೀಸಲು ಕ್ಷೇತ್ರಗಳಲ್ಲೂ ಆರ್ಹ ಸಮುದಾಯಗಳಿಗೆ ಸೂಕ್ತವಾದ ನ್ಯಾಯ ಒದಗಿಸಲು ಸಾಧ್ಯವಾಗಿಲ್ಲ. ಈ ನಿಟ್ಟಿನಲ್ಲಿ ಸಮುದಾಯ ಸಂಘಟನೆಯ ಮೂಲಕ ಮೀಸಲು ಕ್ಷೇತ್ರಗಳಲ್ಲಿ ಆರ್ಹ ಸಮುದಾಯ ಸ್ಥಾನ ಪಡೆಯುವಯಲ್ಲಿ ಮುಂದಾಗಬೇಕು. ಸಂಘಟನೆಯಿಂದ ಮಾತ್ರ ಬದಲಾವಣೆ ಸಾಧ್ಯವೆಂದು ನಗರಸಭೆಯ ಮಾಜಿ ಸದಸ್ಯ ಟಿ.ಜೆ.ವೆಂಕಟೇಶ್ ತಿಳಿಸಿದರು.ಅವರು, ನಗರದ ಪ್ರವಾಸಿಮಂದಿರದ ಬಳಿ ಅ.1ರ ಭಾನುವಾರ ರಾಜ್ಯ ಮಾದಿಗ ಯುವ ಸೇನೆ, ಮಾದಿಗ ದಂಡೋರ ಸೇರಿದಂತೆ ದಲಿತ ಸಂಘಟನೆಗಳು ಹಮ್ಮಿಕೊಂಡಿರುವ ಜನ ಪ್ರತಿನಿಧಿಗಳ ಅಭಿನಂದನಾ ಸಮಾರಂಭದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ, ಕರಪತ್ರ ವಿತರಿಸಿ ಮಾತನಾಡಿದರು. ಪುರಸಭೆ ಮಾಜಿ ಸದಸ್ಯ ಎಂ.ಚೇತನ್‌ಕುಮಾರ್ ಮಾತನಾಡಿ, ಶೋಷಿತ ಸಮುದಾಯ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಆಶಯದಂತೆ ಮೀಸಲು ಕ್ಷೇತ್ರಗಳಲ್ಲಿ ಪ್ರವೇಶಿಸಲು ಮುಕ್ತ ಅವಕಾಶವನ್ನು ಒದಗಿಸಬೇಕಿದೆ. ಸಮುದಾಯ ಈ ನಿಟ್ಟಿನಲ್ಲಿ ಸಂಘಟನೆಯೂ ಸೇರಿದಂತೆ ಹಲವಾರು ಹೋರಾಟಗಳ ಮೂಲಕ ತಮ್ಮ ನ್ಯಾಯಬದ್ದವಾದ ಹಕ್ಕು ಪಡೆಯಬೇಕು ಎಂದರು.ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಎನ್.ಓಬಳೇಶ್ ಮಾತನಾಡಿದರು. ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಚೌಳೂರು ಪ್ರಕಾಶ್ ಮಾತನಾಡಿ. ಶರಣ ಪರಂಪರೆಯ ಮಾದರ ಚನ್ನಯ್ಯಸ್ವಾಮಿ ಹಾದಿಯಾಗಿ ಎಲ್ಲರೂ ಈ ಬಗ್ಗೆ ತಮ್ಮ ಸ್ವಷ್ಟ ಅಭಿಪ್ರಾಯವನ್ನು ತಿಳಿಸಿದ್ದು, ಸಮುದಾಯ ಸೂಕ್ತ ರೀತಿಯಲ್ಲಿ ಮೀಸಲಾತಿ ಪಡೆಯುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

## ಪ್ರಮುಖ ಸುದ್ದಿ

# ಎಸ್.ಸಿ.ಪಿ, ಟಿ.ಎಸ್.ಪಿ ಯೋಜನೆ ಸೌಲಭ್ಯವನ್ನು ಸಕಾಲದಲ್ಲಿ ಅರ್ಹ ಫಲಾನುಭವಿಗಳಿಗೆ ತಲುಪಿಸಿ: ಡಾ. ವೆಂಕಟೇಶ್ ಎಂ.ವಿ

» ದಾವಣಗೆರೆ

ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟು ಯೋಜನೆಯ ಸೌಲಭ್ಯವನ್ನು ವಿವಿಧ ಇಲಾಖೆಗಳಿಗೆ ನಿಗದಿಪಡಿಸಿದ ಅನುದಾನದಲ್ಲಿ ಹಾಗೂ ನಿಗದಿತ ಅವಧಿಯಲ್ಲಿ ಅರ್ಹ ಫಲಾನುಭವಗಳಿಗೆ ತಲುಪಿಸಬೇಕೆಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಅನುಸೂಚಿತ ಜಾತಿ ಹಾಗೂ ಅನುಸೂಚಿತ ಬುಡಕಟ್ಟು ಯೋಜನೆಯಡಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲಿನೆ ನಡೆಸಿ ಅವರು ಮಾತನಾಡಿದರು.

ಪ್ರಸಕ್ತ ಸಾಲಿನಲ್ಲಿ ಇಲಾಖಾವಾರು ಎಸ್.ಸಿ.ಪಿ ಹಾಗೂ ಟಿ.ಎಸ್.ಪಿ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿರುತ್ತದೆ ಅದರಂತೆ ಜಿಲ್ಲಾ ಮಟ್ಟದಲ್ಲಿ ಇಲಾಖೆಗಳು ಭೌತಿಕ ಮತ್ತು ಆರ್ಥಿಕ ಸಾಧನೆ ಮಾಡಬೇಕು ಎಂದು ಸೂಚಿಸಿದರು.



ಯಾವುದೇ ಇಲಾಖೆಗಳು ಈ ಯೋಜನೆಗಳಿಗೆ ಮೀಸಲಿರಿಸಿದ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡದೇ ಅನ್ಯ ಉದ್ದೇಶಕ್ಕೆ ಬಳಕೆ ಮಾಡಿದ್ದಲ್ಲಿ ಅಂತಹ ಅಧಿಕಾರಿಗಳ ಮೇಲೆ ಕಾನೂನು ಬದ್ಧವಾಗಿ ಕ್ರಮ ಕೈಗೊಳ್ಳಲಾಗುತ್ತದೆ. ಇದನ್ನು ಎಲ್ಲಾ ಇಲಾಖೆಗಳು ಗಮನದಲ್ಲಿರಿಸಿಕೊಳ್ಳಬೇಕು ಎಂದರು.

ಆಯಾ ತಿಂಗಳು ನಿಗದಿಪಡಿಸಿದ ಗುರಿಗಿಂತ ಹೆಚ್ಚು ಸಾಧನೆ ಮಾಡಬೇಕು ವರ್ಷಾಂತ್ಯದವರೆಗೆ ಕಾಯದೇ ತ್ವರಿತಗತಿಯಲ್ಲಿ ಆರ್ಥಿಕ ಹಾಗೂ ಭೌತಿಕ ಪ್ರಗತಿ ಸಾಧಿಸಬೇಕು ಎಂದರು. ಯೋಜನೆಗಳಡಿ ಇಲಾಖೆವಾರು ಫಲಾನುಭವಿಗಳಿಗೆ ಸೌಲಭ್ಯವನ್ನು ಕಲ್ಪಿಸುವುದು ಮಾತ್ರವಲ್ಲದೆ ಅದರಿಂದಾದ ಆರ್ಥಿಕ ಬದಲಾವಣೆ ಅಥವಾ ಅಭಿವೃದ್ಧಿಯನ್ನು ಪರಿಶೀಲಿಸಬೇಕು. ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ ಯೋಜನೆಗಳಡಿ ನಿರ್ಮಾಣವಾದ ರಸ್ತೆಗಳು 30 ವರ್ಷ ಬಾಳಿಕೆ ಬರುವಂತಾಗಬೇಕು. ಈ ಅವಧಿಯೊಳಗೆ ಕಳಪೆ ಕಾಮಗಾರಿ ಸಾಬೀತಾದರೆ ಅಂತಹ ಅಧಿಕಾರಿಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು.

ಜಗಳೂರು ತಾಲೂಕಿನಲ್ಲಿ ಹೆಚ್ಚಾಗಿ ಸ್ಮಶಾನಕ್ಕೆ ಸಂಬಂಧಿಸಿದ ಸಮಸ್ಯೆಗಳಿದ್ದು, ಸ್ಮಶಾನಕ್ಕೆ ಜಾಗವನ್ನು ಖರೀದಿ ಮಾಡಲು ಕ್ರಮ ಕೈಗೊಳ್ಳಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಸಾಂತ್ವನ ಕೇಂದ್ರಗಳಲ್ಲಿ ಶೋಷಣೆಗೆ ಒಳಪಟ್ಟ ಮಹಿಳೆಯರು ಮಾನಸಿಕವಾಗಿ, ಆರ್ಥಿಕವಾಗಿ ಸಬಲರಾಗುವ ನಿಟ್ಟಿನಲ್ಲಿ ವಿವಿಧ ಉತ್ಪನ್ನ ಚಟುವಟಿಕೆ ಕೈಗೊಳ್ಳಬೇಕು ಹಾಗೂ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಅರ್ಜಿ ಸಲ್ಲಿಸುವಿಕೆಯಲ್ಲಿನ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಿ ಸೌಲಭ್ಯ ಒದಗಿಸಬೇಕು ಮತ್ತು ಸಖಿ ಕೇಂದ್ರಗಳಿಗೆ ಅಧಿಕಾರಿಗಳು 15 ದಿನಗಳಿಗೊಮ್ಮೆ ಕಡ್ಡಾಯವಾಗಿ ಭೇಟಿ ನೀಡಬೇಕು.

ರೇಷ್ಮೆ ಇಲಾಖೆಯಿಂದ ರೇಷ್ಮೆ ಮನೆ ನಿರ್ಮಾಣಕ್ಕೆ ಜಿಲ್ಲೆಯ ಹೊನ್ನಾಳಿ, ನ್ಯಾಮತಿ ತಾಲ್ಲೂಕುಗಳಲ್ಲಿ ಮಾತ್ರವೇ ಫಲಾನುಭವಿಗಳಿಂದ ಅರ್ಜಿ ಬರುತ್ತಿದ್ದು, ಇನ್ನುಳಿದ ತಾಲ್ಲೂಕುಗಳಿಂದಲೂ ಅರ್ಜಿಗಳು ಬರಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ಅಗತ್ಯವಾದ ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ವಸತಿ ಶಾಲೆಗಳಿಗಾಗಿ ಅನುಮೋದನೆಗೊಂಡ ಜಾಗಗಳಲ್ಲಿ ತ್ವರಿತವಾಗಿ ಕಟ್ಟಡ ನಿರ್ಮಾಣ ಮಾಡಬೇಕು ಎಂದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣನಾಯ್ಕ್, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಪಿ.ರಮೇಶ್, ಡಿ.ಡಿ.ಪಿ.ಐ ಕೊಟ್ರೇಶ್, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಷಣ್ಮುಖಪ್ಪ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೆ.ನಾಗರಾಜ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ವಾಸಂತಿ ಉಪ್ಪಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಗಾಯಿತ್ರಿ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ಸಾಲ ಮಾಡಿ ಮದುವೆ ಮಾಡುವುದು ಅನಾರೋಗ್ಯಕಾರಿ

» ಮೊದಲ ಪುಟದಿಂದ

ಶಕ್ತಿಯೋಜನೆಯ ಪರಿಣಾಮ ಭಕ್ತರು, ಅದರಲ್ಲೂ ಮಹಿಳಾ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಮಲೈ ಮಾದೇಶ್ವರನ ದರ್ಶನ ಪಡೆಯುತ್ತಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

ಮುಂದಿನ ಐದು ವರ್ಷದಲ್ಲಿ ಮಲೈ ಮಹದೇಶ್ವರ ಕ್ಷೇತ್ರದ ಚಿತ್ರಣವನ್ನೇ ಬದಲಾಯಿಸ್ತೀವಿ ಎಂದು ಮಹತ್ವದ ಘೋಷಣೆ ಮಾಡಿದ ಮುಖ್ಯಮಂತ್ರಿಗಳು ಕುಡಿಯುವ ನೀರು ಮತ್ತು ಶುಚಿತ್ವಕ್ಕೆ ಹೆಚ್ಚಿನ ಆದ್ಯತೆ ನೀಡಿ ಎಂದು ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶಿವರಾತ್ರಿ ದೇಶೀಕೇಂದ್ರ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶ್ರೀ ಪಟ್ಟದ ಗುರುಸ್ವಾಮಿಗಳು, ಶ್ರೀ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮಿಗಳ ದಿವ್ಯ ಸಮ್ಮುಖದಲ್ಲಿ ಅಧ್ಯಕ್ಷತೆಯನ್ನು ಹನೂರು ಶಾಸಕ ಎಂ.ಆರ್.ಮಂಜುನಾಥ್ ವಹಿಸಿದ್ದರು. ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸೇರಿ ಜಿಲ್ಲೆಯ ಶಾಸಕರು ಮತ್ತು ನಾಯಕರು ಉಪಸ್ಥಿತರಿದ್ದರು.

**ರಾಷ್ಟ್ರಪತಿ ಭವನ ಇನ್ನು ಮುಂದೆ ತಪೋಭವನ:** ಮಲೈ ಮಹದೇಶ್ವರ ಬೆಟ್ಟದಲ್ಲಿರುವ ರಾಷ್ಟ್ರಪತಿ ಭವನದ ಹೆಸರು ಬದಲಾಗಿದೆ. ಇನ್ನು ಮುಂದೆ ಇದು ತಪೋಭವನ. ಮಾದೇಶ್ವರ ತಪಸ್ಸು ಮಾಡಿದ ಶಕ್ತಿ ಕೇಂದ್ರ ಇದು. ಆದ್ದರಿಂದ ಇದನ್ನು ನಾವು ತಪೋಭವನ ಎಂದು ಕರೆಯಬೇಕು. ಶ್ರೀ ಶ್ರೀ ಶಿವರಾತ್ರಿ ದೇಶೀಕೇಂದ್ರ ಮಹಾ ಸ್ವಾಮಿಗಳ ಸಲಹೆಯಂತೆ ತಪೋಭವನ ಎಂದು ಬದಲಾಯಿಸಿದ್ದೇವೆ ಎಂದರು.

## ಅ.01 ರಂದು ವಿಶ್ವ ಹಿರಿಯ ನಾಗರೀಕರ ದಿನಾಚರಣೆ

ದಾವಣಗೆರೆ: ಅಕ್ಟೋಬರ್ 01 ರಂದು ನಗರದ ಎಂಸಿಸಿ 'ಬಿ' ಬ್ಲಾಕ್, ಕುವೆಂಪು ನಗರದ ಮುಖ್ಯರಸ್ತೆ ಪದ್ಮಶ್ರೀ ಚಿಂದೋಡಿಲೀಲಾ ಕಲಾ ಕ್ಷೇತ್ರದಲ್ಲಿ "ವಿಶ್ವ ಹಿರಿಯ ನಾಗರೀಕರ ದಿನಾಚರಣೆ-ಕಾರ್ಯಕ್ರಮ ಏರ್ಪಡಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಎಸ್.ಎಸ್. ಕೇರ್ ಟ್ರಸ್ಟ್, ಜಿಲ್ಲಾ ಹಿರಿಯ ನಾಗರಿಕರ ಸಂಘ (ರಿ.), ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘ, ಆದರ್ಶ ಸಮಾಜ ಕಾರ್ಯ ಸಂಸ್ಥೆ, ಹಾಗೂ ಜಿಲ್ಲೆಯಲ್ಲಿ ಹಿರಿಯ ನಾಗರೀಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳು ಸಹಯೋಗದಲ್ಲಿ ಕಾರ್ಯಕ್ರಮ ಏರ್ಪಡಿಸಿದೆ.

ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ದಕ್ಷಿಣ ಕ್ಷೇತ್ರದ ಶಾಸಕರು ಹಾಗೂ ಹಿರಿಯ ನಾಗರೀಕರ ಸಂಘದ ಮಹಾಪೋಷಕರಾದ ಡಾ.ಶಾಮನೂರು ಶಿವಶಂಕರಪ್ಪ ಇವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ.ಜಿ.ಎಂ. ಸಿದ್ದೇಶ್ವರ, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಸದಸ್ಯರಾದ ಕೆ.ಪಿ.ನಂಜುಂಡಿ ವಿಶ್ವಕರ್ಮ, ರವಿಕುಮಾರ್ ಎನ್, ಡಾ. ತೇಜಸ್ವಿನಿಗೌಡ, ಎಸ್.ಎಲ್ ಭೋಜೇಗೌಡ, ವೈ.ಎ.ನಾರಾಯಣಸ್ವಾಮಿ, ಚಿದಾನಂದ.ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ದಾವಣಗೆರೆ ಜಿಲ್ಲಾ ಹಿರಿಯ ನಾಗರಿಕರ ಸಂಘದ ಅಧ್ಯಕ್ಷರಾದ ಎಸ್.ಟಿ ಕುಸುಮ ಶ್ರೇಷ್ಠಿ, ಕಾರ್ಯದರ್ಶಿಯಾದ ಎಸ್ ಗುರುಮೂರ್ತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ವಾಸಂತಿ ಉಪ್ಪಾರ್, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಅಧಿಕಾರಿ ಕೆ.ಕೆ ಪ್ರಕಾಶ್, ಕೆ ಉಪಸ್ಥಿತರಿರುವರು.

## ಎನ್ ಎಂ ಎಂ ಎಸ್ ಪರೀಕ್ಷೆಗೆ ಅರ್ಜಿ ಆಹ್ವಾನ

ದಾವಣಗೆರೆ: ಎನ್‌ಎಂಎಂಎಸ್ ಪರೀಕ್ಷೆಯನ್ನು ಡಿ.17 ರಂದು ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು ಏಖಕಿಂಂಅ ವತಿಯಿಂದ ನಡೆಸಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎನ್‌ಎಂಎಂಎಸ್ ಪರೀಕ್ಷೆಯನ್ನು ಸರ್ಕಾರಿ, ಸ್ಥಳೀಯ ಸಂಸ್ಥೆಗಳ ಶಾಲೆಗಳು, ಅನುದಾನಿತ, ಶಾಲೆಗಳಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು https://kseab.karnataka.gov.in ವೆಬ್ ಸೈಟ್‌ನಲ್ಲಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ಅ.4 ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕ್ಷೇತ್ರಶಿಕ್ಷಣಾಧಿಕಾರಿಗಳ ಕಛೇರಿ, ಹಾಗೂ ಜಿಲ್ಲಾ ಎನ್‌ಎಂಎಂಎಸ್ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದಲ್ಲಿ ಎನ್‌ಎಂಎಂಎಸ್ ಜಿಲ್ಲಾ ನೋಡಲ್ ಅಧಿಕಾರಿ ಮಂಜುನಾಥಚಾರಿ ಬಿ ಮೊ.ಸಂ:-8660520686 ಸಂಪರ್ಕಿಸಿ.

### ರಾಜ್ಯದ ಶೈಕ್ಷಣಿಕ ಪ್ರಗತಿಯಲ್ಲಿ ಖಾಸಗಿ ಅನುದಾನ ರಹಿತ ಶಿಕ್ಷಕರ ಕೊಡುಗೆ ಅಪಾರ: ಮಧುಬಂಗಾರಪ್ಪ ಭರವಸೆ

# ಶಿಕ್ಷಕರ ಸಮಸ್ಯೆಗಳ ಬಗ್ಗೆ ಸಿಎಂ ಜತೆ ಚರ್ಚೆ

» ಚಳ್ಳಕೆರೆ

ರಾಜ್ಯದ ಸಮಗ್ರ ಶೈಕ್ಷಣಿಕ ಅಭಿವೃದ್ಧಿಯಲ್ಲಿ ಖಾಸಗಿ ಅನುದಾನ ರಹಿತ ಶಾಲಾ ಶಿಕ್ಷಕರ ಪಾತ್ರ ಮಹತ್ವದಿಂದ ಕೂಡಿದೆ. ವೇತನ, ಬಡ್ತಿ, ಉತ್ತಮ ಶಿಕ್ಷಕ ಪ್ರಶಸ್ತಿ, ಬಿಸಿಯೂಟ ಸೇರಿದಂತೆ ಹಲವಾರು ಸಮಸ್ಯೆಗಳಿಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಹಂತ, ಹಂತವಾಗಿ ಸಮಸ್ಯೆಗಳನ್ನು ನಿವಾರಣೆ ಮಾಡುವ ಭರವಸೆಯನ್ನು ರಾಜ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧುಬಂಗಾರಪ್ಪ ತಿಳಿಸಿದರು.

ಅವರು, ನಗರದ ಶ್ರೀಗುರುರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ತಾಲ್ಲೂಕು ಖಾಸಗಿ ಅನುದಾನ ರಹಿತ ಶಾಲಾ ಆಡಳಿತ ಮಂಡಳಿ ಟ್ರಸ್ಟ್ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ, ಉತ್ತಮ ಶಿಕ್ಷಕ ಪ್ರಶಸ್ತಿ ಹಾಗೂ ರಾಜ್ಯಮಟ್ಟದ ಶೈಕ್ಷಣಿಕ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು. ರಾಜ್ಯದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚು ಮಹತ್ವವನ್ನು ನೀಡುವ ಮಹದಾಸೆಯನ್ನು ಈ ರಾಜ್ಯದ ಧೀಮಂತ, ದಿವಂಗತ ಮಾಜಿ ಮುಖ್ಯಮಂತ್ರಿ ಎಸ್.ಬಂಗಾರಪ್ಪನವರು ಹೊಂದಿದ್ದರು. ಶಿಕ್ಷಣ ಇಲಾಖೆಯ ಅಭಿವೃದ್ಧಿಪರ ಚಿಂತನೆಗಳಿಗೆ ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಮುನ್ನಡೆಯುತ್ತೇನೆ. ಖಾಸಗಿ ಅನುದಾನ ರಹಿತ ಶಿಕ್ಷಣ ಹಲವಾರು ಸಮಸ್ಯೆಗಳ ಬಗ್ಗೆ ಶಿಕ್ಷಕ ಸಂಘಟನೆಯಾದ ಕಾಮ್ಸ್, ರುಪ್ಸ್,



ಕುಸುಮ ಮತ್ತು ಇನ್ನಿತರ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸುವ ಭರವಸೆ ನೀಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಸಿರಿಗೆರೆ ತರಳಬಾಳು ಬೃಹ್ಮಠದ ಜಗದ್ಗುರು ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ಮಾತನಾಡಿ, ರಾಜ್ಯ ಸರ್ಕಾರ ಶಿಕ್ಷಣ ಇಲಾಖೆಗೆ ಮೀಸಲಿಟ್ಟ ಹಣವನ್ನು ಯಾವುದೇ ಕಾರಣಕ್ಕೂ ಬೇರೆ ಇಲಾಖೆಗೆ ವರ್ಗಾವಣೆ ಮಾಡಬಾರದು. ಶಿಕ್ಷಣದ ಪಠ್ಯದಲ್ಲಿ ಸಂಗೀತ ನೃತ್ಯದಂತಹ ವಿಷಯಗಳನ್ನು ಸೇರ್ಪಡೆ ಮಾಡಿ ಶಾಲೆಗಳಲ್ಲೂ ಸಹ ಸಂಗೀತ ನೃತ್ಯ ತರಗತಿಗಳು ನಡೆಯುವಂತಾಗಬೇಕು. ಸಂವಿಧಾನ ಎಲ್ಲರಿಗೂ ಶಿಕ್ಷಣವನ್ನು ನೀಡುವ ಅವಕಾಶವ ನೀಡಿದ್ದು ಇದರ ಸದುಪಯೋಗವಾಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಇಂದಿನ ಈ ಕಾರ್ಯಕ್ರಮ ಶಿಕ್ಷಣ ಇಲಾಖೆಯಲ್ಲಿ ಅಮೂಲಾಗ್ರ ಬದಲಾವಣೆಯನ್ನು ತರುವ ನಿಟ್ಟಿನಲ್ಲಿ ಯಶಸ್ವಿಯಾಗಿದೆ ಎಂದು ಭಾವಿಸುವೆ. ಯಾವುದೇ ಶಾಲೆ ಇರಲಿ ವಿದ್ಯಾರ್ಥಿಗಳಿಗೆ ಶಿಕ್ಷಕರು ಉತ್ತಮ ಬೋಧನೆ ನೀಡುವ ಮೂಲಕ ಅವರ ಬದುಕಿಗೆ ದಾರಿದೀಪವಾಗಬೇಕಲ್ಲದೆ, ಶಿಕ್ಷಣವಂತ ಸಮಾಜ ನಿರ್ಮಾಣಕ್ಕೂ ಕೊಡಿಗೆ ನೀಡಬೇಕು ಎಂದರು.

ರುಪ್ಸಾ ರಾಜ್ಯಾಧ್ಯಕ್ಷ ಲೋಕೇಶ್‌ತಾಳಿಕಟ್ಟೆ, ಕಾಮ್ಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಶಶಿಕುಮಾರ್ ಮಾತನಾಡಿ, ಶಿಕ್ಷಕರಿಗೆ ಸುರಕ್ಷತಾ ಕಾನೂನುಗಳನ್ನು ಜಾರಿಗೆ ತರಬೇಕು ಇದು ಅತ್ಯಂತ ಮಹತ್ವದಿಂದ ಕೂಡಿದೆ. ಶಿಕ್ಷಕರು ನಾಲ್ಕು ಗೋಡೆಯ ಮಧ್ಯದಲ್ಲಿ ವಿದ್ಯಾರ್ಥಿಗಳಿಗೆ ವಿದ್ಯಾದಾನ ಮಾಡುತ್ತಾರೆ. ಇವರ ರಕ್ಷಣೆಗೆ ಸರ್ಕಾರ ಆರೋಗ್ಯ ವಿಮೆ ತರುವ ಮೂಲಕ ಮುಂದಾಗಬೇಕು ಎಂದರು.

ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ಸರ್ಕಾರಿ ಅನುದಾನ ಹಾಗೂ ಅನುದಾನ ರಹಿತ ಶಾಲಾ ಶಿಕ್ಷಕರಿಗೆ ಮತ್ತು ಮಕ್ಕಳಿಗೆ ವಿಜ್ಞಾನ ವಿಚಾರದಲ್ಲಿ ಮಾರ್ಗದರ್ಶನ ನೀಡಲು ಸುಮಾರು 400 ಎಕರೆ ಭೂಮಿಯನ್ನು ಸೈನ್ಸ್ ಪಾರ್ಕ್ ನಿರ್ಮಾಣಕ್ಕೆ ಮೀಸಲಿಟ್ಟಿದೆ. ಶಿಕ್ಷಣ ಸಚಿವರು ಈ ಬಗ್ಗೆ ಸರ್ಕಾರದೊಂದಿಗೆ ಚರ್ಚಿಸಬೇಕು, ಕೇಂದ್ರ ಸಚಿವರನ್ನು ಸಂಪರ್ಕಿಸಿ ಈ ಯೋಜನೆ ಜಾರಿಗೆ ಪ್ರಯತ್ನಿಸುವೆ. ಇದರಿಂದ ವಿಜ್ಞಾನ ವಿಷಯದಲ್ಲಿ ವಿದ್ಯಾರ್ಥಿಗಳಿಗೆ ಇನ್ನೂ ಹೆಚ್ಚಿನ ನೈಪುಣ್ಯತೆದೊರೆಯುತ್ತದೆ ಎಂದರು. ಇದೇ ಸಂದರ್ಭದಲ್ಲಿ ಜೀವಮಾನ ಸಾಧನೆಗಾಗಿ ಡಾ.ಕೆ.ಎಂ.ಜಯಕುಮಾರ್, ಕೆ.ಪಿ.ನಾಗಭೂಷಣ್, ಕೆ.ಎಂ.ಶಿವಸ್ವಾಮಿ, ಮೈಲನಹಳ್ಳಿ ಚಂದ್ರಣ್ಣ, ಎಚ್.ಗಂಗಣ್ಣ, ನಾಗರೆಡ್ಡಿ, ಶ್ರೀಮತಿಲೋಕನಾಥರವರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಉಳಿದಂತೆ ತಾಲ್ಲೂಕಿನ ಸುಮಾರು 60ಕ್ಕೂ ಹೆಚ್ಚು ಶಿಕ್ಷಕರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಅಧ್ಯಕ್ಷ ಯಾದಲಗಟ್ಟೆ ಜಗನ್ನಾಥ, ಕಾರ್ಯದರ್ಶಿ ದಯಾನಂದಪ್ರಹ್ಲಾದ್, ಡಿಡಿಪಿಐ ರವಿಶಂಕರರೆಡ್ಡಿ, ಬಿಇಒ ಕೆ.ಎಸ್.ಸುರೇಶ್, ರಾಜೇಶ್‌ಗುಪ್ತ, ಕೆ.ರಮೇಶ್‌ಬಾಬು, ಚನ್ನಕೇಶವಪ್ಪ, ವಿ.ಮಂಜುನಾಥ, ಚಿಕ್ಕಣ್ಣ, ಪಾಲಯ್ಯ, ಮಾರುತಿ, ಜೆ.ಸಿ.ಶಶಿಕುಮಾರ್, ಶಿವಗಂಗಮ್ಮ, ಪಾರ್ವತಿ, ಮುಕ್ಕಣ್ಣನವರ್, ಗೌರೀಶ್, ಶುಭಾಶ್‌ಲೋಕನಾಥ ಮುಂತಾದವರು ಪಾಲ್ಗೊಂಡಿದ್ದರು.

# ಮಹಿಳಾ ಸಮುದಾಯಗಳಿಗೆ ಹೆಚ್ಚಿನ ಸೌಲಭ್ಯ ವಿತರಣೆಗೆ ಸರ್ಕಾರ ಚಿಂತನೆ: ಲಕ್ಷ್ಮಿಹೆಬ್ಬಾಳ್ಕರ್

» ಚಳ್ಳಕೆರೆ

ಕರ್ನಾಟಕ ರಾಜ್ಯದ ಜನತೆಗೆ ಕಾಂಗ್ರೆಸ್ ಪಕ್ಷ ನೀಡಿದ ಐದು ಗ್ಯಾರಂಟಿಗಳನ್ನು ಜಾರಿಗೆ ತರುವ ಮೂಲಕ ಜನತೆಗೆ ನೀಡಿದ ಭರವಸೆಯನ್ನು ಕಾಂಗ್ರೆಸ್ ಪಕ್ಷ ಈಡೇರಿಸುವತ್ತ ದಿಟ್ಟ ಹೆಜ್ಜೆ ಇಟ್ಟಿದೆ. ಈಗಾಗಲೇ ನಾಲ್ಕು ಗ್ಯಾರಂಟಿಗಳು ಯಾವುದೇ ಲೋಪವಿಲ್ಲದೆ ಜಾರಿಯಾಗಿದ್ದು, ಬಾಕಿ ಉಳಿದ ವಿದ್ಯಾನಿಧಿಯನ್ನು ಸಹ ಶೀಘ್ರದಲ್ಲೇ ಜಾರಿಗೊಳಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿಹೆಬ್ಬಾಳ್ಕರ್ ತಿಳಿಸಿದರು.

ಚಳ್ಳಕೆರೆ ನಗರದ ಹೋಟೆಲ್ ಉದ್ಯಮಿ ಕಿಶೋರ್‌ಕುಮಾರ್‌ಶೆಟ್ಟಿ ಮತ್ತು ತಂಡ ಮಹಿಳಾ ಸಮುದಾಯಕ್ಕೆ ಹೆಚ್ಚು ಸೌಲಭ್ಯವನ್ನು ನೀಡಿದ ಹಾಗೂ ರಾಜ್ಯದಲ್ಲಿ ಮಹಿಳಾ ಸಮುದಾಯಕ್ಕಾಗಿ ಯೋಜನೆಗಳನ್ನು ಸಾಕರಗೊಳಿಸುವಲ್ಲಿ ದಿಟ್ಟ ಹೆಜ್ಜೆ ಇಟ್ಟ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರವರನ್ನು ಬೆಂಗಳೂರಿನ ಅವರ ನಿವಾಸದಲ್ಲಿ ಅಭಿನಂದಿಸಿದ ಸಂದರ್ಭದಲ್ಲಿ ಮಾತನಾಡಿದರು. ಮುಂದಿನ ದಿನಗಳಲ್ಲೂ ಸಹ ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಇನ್ನೂ ಹೆಚ್ಚು ಸಂಘಟನಾತ್ಮಕವಾಗಿ ಬೆಳೆಯಲಿದೆ



ಎಂದರು.

ಉದ್ಯಮಿ ಕಿಶೋರ್‌ಕುಮಾರ್‌ಶೆಟ್ಟಿ, ರಾಜ್ಯದಲ್ಲಿ ಪ್ರಸ್ತುತ ಸರ್ಕಾರ ಮಹಿಳಾ ಸಮುದಾಯಕ್ಕೆ ಎಲ್ಲಾ ರೀತಿಯ ಸೌಲಭ್ಯಗಳನ್ನು ನೀಡುತ್ತಿರುವ ಬಗ್ಗೆ ಸಾರ್ವಜನಿಕ ವಲಯದಲ್ಲಿ ಸಂತಸವಿದೆ. ಈ ನಿಟ್ಟಿನಲ್ಲಿ ಸರ್ಕಾರ ಸಾಮೂಹಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ನಿಟ್ಟಿನಲ್ಲಿ ಕಾಯೋನ್ಮುಖರಾಗಬೇಕು. ರಾಜ್ಯದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾಗಿ ತಾವು ಸಹ ಸಾರ್ವಜನಿಕರ ಅಭಿಪ್ರಾಯಕ್ಕೆ ಮನ್ನಣೆ ನೀಡುವಂತೆ ಸರ್ಕಾರದ ಮೇಲೆ ಒತ್ತಡ ತರಬೇಕು ಎಂದರು.

ಈ ಸಂದರ್ಭದಲ್ಲಿ ಉದ್ಯಮಿಗಳಾದ ವಿಕಾಸ್‌ಹೆಗಡೆ, ರಂಜಿತ್‌ಶೆಟ್ಟಿ, ಮೊಳಹಳ್ಳಿ ದಿನೇಶ್‌ಹೆಗಡೆ, ಸದಾಶಿವಶೆಟ್ಟಿ, ಜೀವಿತ್‌ಶೆಟ್ಟಿ, ಸಂತೋಷ್‌ಶೆಟ್ಟಿ ಉಪಸ್ಥಿತರಿದ್ದರು.



ದಾವಣಗೆರೆ ನಗರದ ವಿನೋಬನಗರದ ಶ್ರೀ ವೀರ ವರಸಿದ್ಧಿ ವಿನಾಯಕ ಸೇವಾ ಸಮಿತಿ 31ನೇ ವರ್ಷದ ವಿನಾಯಕ ಮಹೋತ್ಸವದ ಗಣಪತಿ ವಿಸರ್ಜನಾ ಕಾರ್ಯಕ್ರಮ ಹಾಗೂ ಬೃಹತ್ ಶೋಭಾ ಯಾತ್ರೆ

## ಅಧ್ಯಕ್ಷ-ಉಪಾಧ್ಯಕ್ಷರ ಮೀಸಲಾತಿ ಪ್ರಕಟಿಸುವಲ್ಲಿ ವಿಳಂಭ ಸೆ.30 ರಂದು ಪ್ರತಿಭಟನೆ

» ಚಿತ್ರದುರ್ಗ

ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಅಧ್ಯಕ್ಷ-ಉಪಾಧ್ಯಕ್ಷರ ಮೀಸಲಾತಿ ಪ್ರಕಟಿಸುವಲ್ಲಿ ವಿಳಂಭ ನೀತಿ ಅನುಸರಿಸುತ್ತಿರುವ ಸರ್ಕಾರದ ಕ್ರಮವನ್ನು ಖಂಡಿಸಿ ಸೆ.30 ರಂದು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸುವ ಕುರಿತು ಜಿಲ್ಲೆಯ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ಸದಸ್ಯರುಗಳ ಒಕ್ಕೂಟದಿಂದ ಪ್ರವಾಸಿ ಮಂದಿರದಲ್ಲಿ ಬುಧವಾರ ನಡೆದ ಸಭೆಯಲ್ಲಿ ತೀರ್ಮಾನಿಸಲಾಯಿತು.

ಅಧ್ಯಕ್ಷ-ಉಪಾಧ್ಯಕ್ಷರ ಅವಧಿ ಮುಗಿದು ಮೂವತ್ತು ತಿಂಗಳು ಕಳೆದಿದ್ದರೂ ಇನ್ನು ಮೀಸಲಾತಿಯನ್ನು ಪ್ರಕಟಿಸದೆ ಸರ್ಕಾರ ಸದಸ್ಯರುಗಳ ಹಕ್ಕುಗಳನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ. ಇದರಿಂದ ಯಾವುದೇ ಸಭೆಗಳು ನಡೆಯುತ್ತಿಲ್ಲ. ಮೂಲಭೂತ ಸೌಕರ್ಯಗಳಿಂದ ಸಾರ್ವಜನಿಕರು ವಂಚನೆಗೊಳಗಾಗುತ್ತಿದ್ದಾರೆ. ಕುಂದುಕೊರತೆ ಮತ್ತು ಸಮಸ್ಯೆಗಳನ್ನು ಆಲಿಸಲು ಆಗುತ್ತಿಲ್ಲ. ಸದಸ್ಯರುಗಳ ಅಧಿಕಾರವನ್ನು ಮೊಟಕುಗೊಳಿಸುವ ಅಧಿಕಾರಿಗಳ ಕುತಂತ್ರವನ್ನು ಖಂಡಿಸಿ 30 ರಂದು ಬೆಳಿಗ್ಗೆ 11 ಗಂಟೆಗೆ ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಹೊರಡಲಾಗುವುದು. ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ಸದಸ್ಯರುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಸಭೆಯಲ್ಲಿ ವಿನಂತಿಸಲಾಯಿತು. ಚಿತ್ರದುರ್ಗ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಬಿ.ಸುರೇಶ್, ಸದಸ್ಯರುಗಳಾದ ನಸ್ರುಲ್ಲಾ, ಶ್ರೀನಿವಾಸ್, ದಾವೂದ್, ಹರೀಶ್, ಜಯಣ್ಣ, ಶಶಿ, ವೆಂಕಟೇಶ್, ಭಾಗ್ಯಮ್ಮ ಭಾಗವಹಿಸಿದ್ದರು.

## ದೆಹಲಿ ಚಲೋ ಯಾತ್ರೆ ಚಿತ್ರದುರ್ಗದ ಜಿಲ್ಲಾಧಿಕಾರಿ ಕಚೇರಿ ಬಳಿ ಸ್ವಾಗತ



ಚಿತ್ರದುರ್ಗ : ನೂತನ ಪಿಂಚಣಿ ರದ್ದುಪಡಿಸುವುದು ಸೇರಿದಂತೆ ಹನ್ನೆರಡು ಬೇಡಿಕೆಗಳನ್ನು ಮುಂದಿಟ್ಟುಕೊಂಡು ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಒಕ್ಕೂಟ ಕಳೆದ 25 ರಂದು ಬೆಂಗಳೂರಿನಿಂದ ಆರಂಭಿಸಿರುವ ದೆಹಲಿ ಚಲೋ ಯಾತ್ರೆ ಮದ್ದೂರು, ಮಳವಳ್ಳಿ, ಮೈಸೂರು, ಹಾಸನ, ಶಿವಮೊಗ್ಗ, ದಾವಣಗೆರೆ ಮೂಲಕ ಬುಧವಾರ ಚಿತ್ರದುರ್ಗಕ್ಕೆ ಆಗಮಿಸಿತು.ರಾಜ್ಯದಲ್ಲಿ ಏಳನೇ ವೇತನ ಆಯೋಗದ ವೇತನ ಪರಿಷ್ಕರಣೆ ಶೇ.40 ರಷ್ಟು ಹೆಚ್ಚಿಸಿ ಕೂಡಲೆ ಜಾರಿಗೊಳಿಸಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಇಲಾಖೆಗಳಲ್ಲಿ, ಸಾರ್ವಜನಿಕ ಉದ್ದಿಮೆಗಳಲ್ಲಿ ಖಾಲಿಯಿರುವ 60 ಲಕ್ಷ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಬೇಕು ಎಂದರು.

ಪ್ರಮುಖ ಸುದ್ದಿ

# ಕರ್ನಾಟಕ ಬಂದ್‌ಗೆ ಸರ್ವೋದಯ ಕರ್ನಾಟಕ ಬೆಂಬಲ

» ಚಿತ್ರದುರ್ಗ

ಕಾವೇರಿ ನದಿ ನೀರನ್ನು ರಾಜ್ಯದಿಂದ ತಮಿಳುನಾಡಿಗೆ ಹರಿಸುತ್ತಿರುವುದರಿಂದ ಜನ ದಂಗೆ ಏಳುವ ಪರಿಸ್ಥಿತಿ ನಿರ್ಮಾಣವಾಗಿದೆ. ತಾಳ್ಮೆಯನ್ನು ಕೆಣಕುವುದು ಸರಿಯಲ್ಲ. ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಿ ಎರಡು ರಾಜ್ಯಗಳ ನಡುವೆ ಎದ್ದಿರುವ ಜಲ ಸಮಸ್ಯೆಗೆ ತಾರ್ಕಿಕ ಅಂತ್ಯ ಕಂಡುಕೊಳ್ಳಬೇಕೆಂದು ಸರ್ವೋದಯ ಕರ್ನಾಟಕ ಪಕ್ಷದ ಜಿಲ್ಲಾಧ್ಯಕ್ಷ ಜೆ.ಯಾದವರೆಡ್ಡಿ ಸಲಹೆ ನೀಡಿದರು.

ವಿವಿಧ ಸಂಘಟನೆಗಳು, ಹೋರಾಟಗಾರರು ಪ್ರವಾಸಿ ಮಂದಿರದಲ್ಲಿ ಬುಧವಾರ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಮದ್ರಾಸ್ ಪ್ರಾಂತ್ಯಕ್ಕೆ ಕರ್ನಾಟಕ ಒಳಗಾಗಿದ್ದ ಸಂದರ್ಭ 1932 ರಲ್ಲಿ ಇಷ್ಟಾನುಸಾರ ಒಪ್ಪಂದ ಮಾಡಿಕೊಂಡು ಅಂದಿನಿಂದ ಪ್ರತಿ ವರ್ಷವೂ ತಮಿಳುನಾಡಿಗೆ ಕಾವೇರಿ ನೀರು ಹರಿಯುತ್ತಿದೆ.

ಜಲವಿವಾದ ಬಗೆಹರಿಸುವ ಪ್ರಯತ್ನವನ್ನು ಯಾರು



ಮಾಡುತ್ತಿಲ್ಲವಾದ್ದರಿಂದ ಎರಡು ರಾಜ್ಯಗಳ ನಡುವೆ ಶಾಂತಿ ಭಂಗವಾಗುತ್ತಿದೆ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಅವೈಜ್ಞಾನಿಕ ಆದೇಶದಿಂದ ರಾಜ್ಯದ ಜನತೆಯಲ್ಲಿ ರೋಷ ಉಕ್ಕಿ ಹರಿಯುತ್ತಿದೆ. ಪ್ರತಿದಿನ ಐದು ಸಾವಿರ ಕ್ಯೂಸೆಕ್ಸ್ ನೀರು ಹರಿಬಿಡುತ್ತಿರುವುದನ್ನು ಖಂಡಿಸಿ ವಿವಿಧ ಸಂಘಟನೆಗಳು ಸೆ.29 ರಂದು ಕರ್ನಾಟಕ ಬಂದ್‌ಗೆ ಕರೆ ನೀಡಿರುವುದಕ್ಕೆ ನಮ್ಮ ಬೆಂಬಲವಿದೆ ಎಂದು ಹೇಳಿದರು.

ತಮಿಳುನಾಡಿಗೆ ವರ್ಷಕ್ಕೆ ಮೂರು ಬೆಳೆ ಕರ್ನಾಟಕಕ್ಕೆ ಒಂದು ಬೆಳೆ. ಇದು ಯಾವ ರೀತಿಯ ಒಪ್ಪಂದ. ನ್ಯಾಯಾಲಯದ ಆದೇಶ ಪಾಲಿಸುತ್ತೇವೆನ್ನುವುದಕ್ಕಿಂತ ಮುಖ್ಯವಾಗಿ ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿ ಜಲಾಶಯಗಳಲ್ಲಿರುವ ನೀರಿನ ಮಟ್ಟವನ್ನು ಮನವರಿಕೆ ಮಾಡಿಕೊಡಬೇಕಿತ್ತು. ರಾಜ್ಯದ ಪಾಲಿಗೆ ಇದೊಂದು ಕರಾಳ ಶಾಸನ. ಚುನಾವಣೆ ಆಯೋಗವಿದ್ದಂತೆ ಜಲವಿವಾದಕ್ಕೆ ಸಂಬಂಧಪಟ್ಟಂತೆ ಜಲ ಆಯೋಗ ರಚಿಸಬೇಕು. ರಾಜ್ಯದಲ್ಲಿ ಭೀಕರ ಬರಗಾಲವಿದ್ದರು ತಮಿಳುನಾಡಿಗೆ ನೀರು ಹರಿಯುತ್ತಿದೆ. ನೈಸರ್ಗಿಕ ನ್ಯಾಯ ತಪ್ಪಿದೆ. ಎಸ್.ಬಂಗಾರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಸುಗ್ರಿವಾಜ್ಞೆ ತಂದು ತಮಿಳುನಾಡಿಗೆ ನೀರು ಬಿಡಲು ಆಗುವುದಿಲ್ಲ ಎನ್ನುವ ದಿಟ್ಟ ನಿರ್ಧಾರ ತೆಗೆದುಕೊಂಡಿದ್ದರು. ಕಾವೇರಿ ನೀರು ಪ್ರಾಧಿಕಾರ ತಮಿಳುನಾಡು ಪರವಾಗಿ ತೀರ್ಮಾನ ಕೊಡುತ್ತಿದೆ ಎಂದು ಆಪಾದಿಸಿದರು.

ಭಾರತ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು, ಎ.ಪಿ.ಎಂ.ಸಿ. ಹಮಾಲರ ಸಂಘದ ಅಧ್ಯಕ್ಷ ಕಾಂ.ಬಿ.ಬಸವರಾಜಪ್ಪ, ರೈತ ಮುಖಂಡ ಧನಂಜಯ ಹಂಪಯ್ಯನಮಾಳಿಗೆ, ರುದ್ರಸ್ವಾಮಿ, ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್‌ಕುಮಾರ್‌ಶೆಟ್ಟಿ ಬಣದ ಜಿಲ್ಲಾಧ್ಯಕ್ಷ ಮಹಾಂತೇಶ್, ಕರ್ನಾಟಕ ರಾಜ್ಯ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಜೆ.ಮಂಜುನಾಥ್, ಪ್ರಧಾನ ಕಾರ್ಯದರ್ಶಿ ವೈ.ಕುಮಾರ್, ಕಾಂ.ಈ.ಸತ್ಯಕೀರ್ತಿ, ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ರಾಜ್ಯ ಉಪಾಧ್ಯಕ್ಷ ಸಿ.ಕೆ.ಗೌಸ್‌ಪೀರ್, ರಾಜಪ್ಪ, ಕರಿಬಸಣ್ಣ ಇನ್ನು ಅನೇಕರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ವೃದ್ಧ ಕಾಣೆ

ದಾವಣಗೆರೆ: ಮಾಯಕೊಂಡ ಪೊಲೀಸ್ ಠಾಣೆಯ ವ್ಯಾಪ್ತಿಯ ರಾಮಗೊಂಡನಹಳ್ಳಿ ಗ್ರಾಮದ ಹನುಮಂತಪ್ಪ ಬಿನ್ ರಾಮಪ್ಪ 50 ವರ್ಷ, ಕುರುಬ ಜನಾಂಗದವರು ಇವರು ಕಳೆದ ಆಗಸ್ಟ್ 28, 2022 ರಂದು ಸಂಜೆ 4 ಗಂಟೆಗೆ ದಾವಣಗೆರೆ ಹೋಗಿ ಬರುತ್ತೇನೆಂದು ಹೇಳಿ ಹೋದವರು ವಾಪಾಸ್ ಮನೆಗೆ ಬಾರದೇ ಕಾಣೆಯಾಗಿರುತ್ತಾರೆ. ಚಹರೆ ವಿವರ ಇಂತಿದೆ. ಎತ್ತರ 5.6 ಅಡಿ, ಗೋಧಿ ಮೈಬಣ್ಣ, ಸಾಧರಣ ಮೈಕಟ್ಟು, ದುಂಡು ಮುಖ ಹೊಂದಿರುತ್ತಾರೆ, ಹೋಗುವಾಗ ಬಾದಾಮಿ ಬಣ್ಣದ ಅಂಗಿ, ಚೆಕ್ಸ್ ಬಣ್ಣದ ಪಂಚೆ ಧರಿಸಿರುತ್ತಾರೆ ಎಂದು ಮಾಯಕೊಂಡ ಪೊಲೀಸ್ ಠಾಣೆಯ ಉಪನಿರೀಕ್ಷಕರಾದ ಅಜ್ಜಪ್ಪ ತಿಳಿಸಿದ್ದಾರೆ.

### ಮಹಿಳೆ ಕಾಣೆ

ದಾವಣಗೆರೆ: ಮಾಯಕೊಂಡ ಪೊಲೀಸ್ ಠಾಣೆಯ ವ್ಯಾಪ್ತಿಯ ಬಾಡ ಗ್ರಾಮದ ಲಲಿತಮ್ಮ ಕೋಂ ರೇವಣಸಿದ್ದಪ್ಪ 50 ವರ್ಷ, ಗಂಗಾಮತ ಜನಾಂಗದವರು ಇವರು ಕಳೆದ 10, ಅಕ್ಟೋಬರ್ 2010 ರಂದು ಮನೆಯಿಂದ ಹೋದವರು ವಾಪಾಸ್ ಮನೆಗೆ ಬಾರದೇ ಕಾಣೆಯಾಗಿರುತ್ತಾರೆ. ಚಹರೆ ವಿವರ ಇಂತಿದೆ. ಎತ್ತರ 5.3 ಅಡಿ, ಗೋಧಿ ಮೈಬಣ್ಣ, ಸಾಧರಣ ಮೈಕಟ್ಟು, ದುಂಡು ಮುಖ ಹೊಂದಿರುತ್ತಾರೆ ಎಂದು ಮಾಯಕೊಂಡ ಪೊಲೀಸ್ ಠಾಣೆಯ ಉಪನಿರೀಕ್ಷಕರಾದ ಅಜ್ಜಪ್ಪ ತಿಳಿಸಿದ್ದಾರೆ.

### ಮಾತು ಬರದ ಪ್ರೇಮಿಗಳ ವೇದನೆ



ನಾಯಕನಹಟ್ಟಿ: ಹೋಬಳಿ, ಎನ್.ದೇವರಹಳ್ಳಿ ಗ್ರಾಮದ ಜೋಗಿ ಜನಾಂಗದ ಸಾವಿತ್ರಮ್ಮ ಸುಮಾರು 33 ವರ್ಷ ಆಂದ್ರ ರಾಜ್ಯದ ಗೋಧಾವರಿ ಜಿಲ್ಲೆ ಮತ್ತು ಮಣಿಕಂಠ ಎಂಬ ಇಬ್ಬರು ಬೆಂಗಳೂರಿನ ಅಮೇಜಾನ್ ಕಂಪನಿಯಲ್ಲಿ ಉದ್ಯೋಗ ಮಾಡುತ್ತಿದ್ದಾಗ ಒಬ್ಬರಿಗೊಬ್ಬರು ಪರಸ್ಪರ ಪ್ರೀತಿಸಿ ಚಳ್ಳಕೆರೆ ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ವಿವಾಹವಾಗಿದ್ದು ಇಬ್ಬರೂ ತಮ್ಮ ಸ್ವಗ್ರಾಮಕ್ಕೆ ಹೋದಾಗ ಸ್ಥಳೀಯ ಗ್ರಾಮ ಪಂಚಾಯಿತಿ ಸದಸ್ಯರು, ಮುಖಂಡರು 30 ಸಾವಿರ ದಂಡವಿಧಿಸಿ ಇಬ್ಬರೂ ಪ್ರೇಮಿಗಳನ್ನು ಗ್ರಾಮದಿಂದ ಬಹಿಷ್ಕರಿಸಿರುತ್ತಾರೆ. ಈ ಬಗ್ಗೆ ಚಳ್ಳಕೆರೆ ಮಹಿಳಾ ಸ್ವಾಂತಾನ ಕೇಂದ್ರದಲ್ಲಿ ತಮ್ಮ ದೂರನ್ನು ದಾಖಲಿಸಿದ್ದು ನ್ಯಾಯ ಒದಗಿಸುವಂತೆ ಕೋರಿರುತ್ತಾರೆ. ಈ ಇಬ್ಬರೂ ಪ್ರೇಮಿಗಳಿಗೆ ಒಂದು ತಿಂಗಳಿನ ಮಗು ಇರುತ್ತದೆ ಬಾಣಂತಿಯ ಯುವತಿ ಗ್ರಾಮದಿಂದ ಬಹಿಷ್ಕರಿಸಿರುತ್ತಾರೆ.

### ದಾವಣಗೆರೆ ವಿವಿ ವ್ಯಾಪ್ತಿಯ ಪದವಿ ಪರೀಕ್ಷೆ ಮುಂದೂಡಿಕೆ

ದಾವಣಗೆರೆ: ಕಾವೇರಿ ನದಿ ನೀರು ವಿವಾದದ ಹಿನ್ನೆಲೆಯಲ್ಲಿ ಕರೆ ನೀಡಲಾಗಿರುವ ಕರ್ನಾಟಕ ಬಂದ್ ಹಿನ್ನೆಲೆಯಲ್ಲಿ ದಿನಾಂಕ 29.09.2023 ರಂದು ನಡೆಯಬೇಕಿದ್ದ ದಾವಣಗೆರೆ ವಿಶ್ವವಿದ್ಯಾನಿಲಯ ವ್ಯಾಪ್ತಿಯ ಎಲ್ಲ ಸ್ನಾತಕೋತ್ತರ ಪದವಿ ಪರೀಕ್ಷೆಗಳನ್ನು ದಿನಾಂಕ 01.10.2023 ರಂದು ನಡೆಸಲಾಗುವುದು ಎಂದು ಪರೀಕ್ಷಾಂಗ ಕುಲಸಚಿವ ಡಾ.ಕೆ.ಶಿವಶಂಕರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜನಮನ್ನಣೆ ಪಡೆದ ನಾಟಕ "ಸಂಬಂಧಗಳ ಸಾವು"



ಇತ್ತೀಚೆಗೆ ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಓಂಕಾರ ಡೆವೆಲಪ್ಮಂಟ್ ಫೌಂಡೇಷನ್ (ರಿ) ಕಲಾ ವೃಂದದವರಿಂದ ಬಳ್ಳಾರಿ ಜಿಲ್ಲೆಯ ಯಳಬಿಂಚಿ ಗ್ರಾಮದ ಬಸವೇಶ್ವರ ಕಲಾ ಭವನದಲ್ಲಿ "ಸಂಬಂಧಗಳ ಸಾವು" ಎಂಬ ಸಾಮಾಜಿಕ ನಾಟಕ ಪ್ರದರ್ಶನಗೊಂಡಿತು.

---

### ಪ್ರವಾಸೋದ್ಯಮ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸಲಹೆ

# ಪರಿಸರ, ಪ್ರವಾಸಿ ತಾಣಗಳ ಸ್ವಚ್ಛತೆಗೆ ಆದ್ಯತೆ ನೀಡಿ

» ಚಿತ್ರದುರ್ಗ

ನಮ್ಮ ಪರಿಸರ ಹಾಗೂ ಜಿಲ್ಲೆಯ ಹೆಮ್ಮೆಯನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಪ್ರಾಚೀನ, ಐತಿಹಾಸಿಕ ಪ್ರವಾಸಿ ತಾಣಗಳಿದ್ದು, ಈ ನಿಟ್ಟಿನಲ್ಲಿ ಎಲ್ಲರೂ ಸೇರಿ ಪ್ರವಾಸಿ ತಾಣಗಳಲ್ಲಿ ಸ್ವಚ್ಛತೆ ಕಾಪಾಡಲು ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.

ನಗರದ ಕೋಟೆ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಐತಿಹಾಸಿಕ ಚಿತ್ರದುರ್ಗ ಕೋಟೆ ಸೇರಿದಂತೆ ಜಿಲ್ಲೆಯ ಎಲ್ಲ ಪ್ರವಾಸಿ ತಾಣಗಳಲ್ಲೂ ಸ್ವಚ್ಛತೆ ಕಾಪಾಡಬೇಕು. ಬೇರೆ ಬೇರೆ ರಾಜ್ಯ ಹಾಗೂ ದೇಶಗಳಿಂದ ನಮ್ಮ ಜಿಲ್ಲೆಯನ್ನು ವೀಕ್ಷಣೆ ಮಾಡಲು ಆಗಮಿಸುವ ಪ್ರವಾಸಿಗರಿಗೆ ಅಗತ್ಯ ಸೌಲಭ್ಯ ಒದಗಿಸುವುದರ ಜೊತೆಗೆ ನಾವು ನಮ್ಮ ಐತಿಹಾಸಿಕ ಪ್ರವಾಸಿ ತಾಣಗಳನ್ನು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಪ್ರಯತ್ನಗಳಾಗಬೇಕು. ನಮ್ಮ ಪರಿಸರ ಹಾಗೂ ಪ್ರಾಚೀನ, ಐತಿಹಾಸಿಕ ಪ್ರವಾಸಿ ತಾಣಗಳನ್ನು ಸ್ವಚ್ಛವಾಗಿಡುವುದು ಹಾಗೂ ಗಿಡಗಳನ್ನು ನೆಡುವುದು, ಪ್ರಾಚೀನ, ಐತಿಹಾಸಿಕ ಸ್ಥಳಗಳನ್ನು ಸಂರಕ್ಷಿಸುವ ಕೆಲಸ ಮಾಡಬೇಕು. ಪರಿಸರಕ್ಕೆ ಹಾನಿಯಾಗುವ ಪ್ಲಾಸ್ಟಿಕ್ ಬಾಟಲಿಗಳನ್ನು ನಿಗದಿತ ಸ್ಥಳದಲ್ಲಿಯೇ ಹಾಕಬೇಕು. ಪ್ರವಾಸಿ ತಾಣಗಳನ್ನು ಪ್ಲಾಸ್ಟಿಕ್ ಮುಕ್ತವನ್ನಾಗಿ ಮಾಡಲು ಎಲ್ಲರೂ ಶ್ರಮಿಸಬೇಕು ಎಂದು ಕರೆ ನೀಡಿದರು.

ಪ್ರತಿ ವರ್ಷವೂ ಒಂದು ಧ್ಯೇಯವಾಕ್ಯದೊಂದಿಗೆ ಪ್ರವಾಸೋದ್ಯಮ ದಿನಾಚರಣೆ ಆಚರಿಸಲಾಗುತ್ತಿದೆ. ಈ ಬಾರಿಯ ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಧ್ಯೇಯವಾಕ್ಯ "ಪ್ರವಾಸೋದ್ಯಮ ಮತ್ತು ಹಸಿರು ಹೂಡಿಕೆ" ಎಂಬುದಾಗಿದೆ. ಶಾಲಾ–ಮಕ್ಕಳ ಟೂರಿಸಂ, ಮೆಡಿಕಲ್ ಟೂರಿಸಂ ಹಾಗೂ ಇಕೋ ಟೂರಿಸಂ, ರಿಲಿಜಿಯಸ್ ಟೂರಿಸಂ ಸೇರಿದಂತೆ ಪ್ರವಾಸೋದ್ಯಮದಲ್ಲಿ ವಿವಿಧ ರೀತಿಯ ಪ್ರವಾಸೋದ್ಯಮಗಳಿವೆ. ಪ್ರವಾಸೋದ್ಯಮ ಮನೋರಂಜನೆ ಜೊತೆಗೆ ಶಿಕ್ಷಣವು ಇದೆ ಎಂದು ತಿಳಿಸಿದ ಅವರು, ಐತಿಹಾಸಿಕ ಚಿತ್ರದುರ್ಗ ಕೋಟೆ ಸೇರಿದಂತೆ ಜಿಲ್ಲೆಯ ಪುರಾತನ ಸ್ಮಾರಕಗಳ ಬಗ್ಗೆ ಜಿಲ್ಲೆಯ ಜನರು ತಿಳುವಳಿಕೆ ಹೊಂದಿರಬೇಕು. ಇದರ ಜೊತೆಗೆ ಬೇರೆ ಬೇರೆ ಜಿಲ್ಲೆಯ ಹಾಗೂ ರಾಜ್ಯದ ಪ್ರಸಿದ್ಧ ವಿಷಯಗಳನ್ನು ತಿಳಿದುಕೊಳ್ಳುವುದೂ ಅಗತ್ಯವಾಗಿದೆ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಆರ್.ರಂಗನಾಥ್ ಮಾತನಾಡಿ, ಉತ್ತಮ ವಾತಾವರಣ, ಪರಿಸರಕ್ಕೆ ಹಸಿರು ಬಹಳ ಮುಖ್ಯ. ಹಸಿರು ಬೆಳೆಸಿ, ಉಸಿರು ಉಳಿಸುವ ಕಾರ್ಯಕ್ರಮ ಹಮ್ಮಿಕೊಂಡು ಪ್ರತಿಯೊಬ್ಬರು ಸ್ವಚ್ಛತೆಗೆ ಆದ್ಯತೆ ನೀಡಿದರೆ ರೋಗಗಳನ್ನು ತಡೆಗಟ್ಟಬಹುದಾಗಿದೆ. ಅಕ್ಟೋಬರ್ 2ರಂದು ಸ್ವಚ್ಛತಾ ಅಂದೋಲನ ಕಾರ್ಯಕ್ರಮ ಹಮ್ಮಿಕೊಂಡು, ಎಲ್ಲರೂ ಸ್ವಯಂ ಪ್ರೇರಿತರಾಗಿ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಸಲಹೆ ನೀಡಿದರು.

ವಿಶ್ವ ಪ್ರವಾಸೋದ್ಯಮ ದಿನಾಚರಣೆ ಅಂಗವಾಗಿ ಚಿತ್ರದುರ್ಗ ಒನಕೆ ಓಬವ್ವ ವೃತ್ತದಿಂದ ಕೋಟೆ ಮುಂಭಾಗದವರೆಗೂ ಪ್ರವಾಸಿ ನಡಿಗೆ ಹಮ್ಮಿಕೊಳ್ಳಲಾಯಿತು. ನಂತರ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ರಸಪ್ರಶ್ನೆ ಸ್ಪರ್ಧೆ, ಕಾಲೇಜು ವಿದ್ಯಾರ್ಥಿಗಳಿಗೆ ಚರ್ಚಾ ಸ್ಪರ್ಧೆ ಮತ್ತು ಚಿತ್ರಕಲಾ ಶಿಬಿರ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಜಿತೇಂದ್ರನಾಥ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ಗೃಹರಕ್ಷಕ ದಳದ ಜಿಲ್ಲಾ ಕಮಾಂಡೆಟ್ ಸಿ.ಕೆ.ಸಂಧ್ಯಾ, ಭಾರತೀಯ ಪುರಾತತ್ವ ಇಲಾಖೆಯ ರಾಣಿ, ಶಿಕ್ಷಕಿ ಮಾಲತಿ ಸೇರಿದಂತೆ ಪ್ರವಾಸಿ ಮಿತ್ರರು ಹಾಗೂ ವಿದ್ಯಾರ್ಥಿಗಳು ಇದ್ದರು.

---

### ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಅಭಿವಿನ್ಯಾಸ ಕಾರ್ಯಕ್ರಮ: ಪ್ರಾಂಶುಪಾಲ ಡಾ.ಹೆಚ್. ಗುಡ್ಡದೇಶ್ವರಪ್ಪ

# ವೈಚಾರಿಕ, ವೈಜ್ಞಾನಿಕ ನೆಲೆಗಟ್ಟಿನಲ್ಲಿ ಶಿಕ್ಷಣ ಪಡೆಯಿರಿ

» ಚಿತ್ರದುರ್ಗ

ವೈಚಾರಿಕ ಹಾಗೂ ವೈಜ್ಞಾನಿಕ ನೆಲೆಗಟ್ಟಿನಲ್ಲಿ ಶಿಕ್ಷಣ ಕಲಿಯಬೇಕಿದೆ ಎಂದು ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ಅಭಿಪ್ರಾಯಪಟ್ಟರು.

ನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುಧವಾರ ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಅಭಿವಿನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಕಾಲೇಜು ಶಿಕ್ಷಣ ಇಲಾಖೆಯ ಆದೇಶದಂತೆ ಪ್ರತಿ ಶೈಕ್ಷಣಿಕ ವರ್ಷದ ಆರಂಭದ ಭಾಗದಲ್ಲಿ ಕಾಲೇಜಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಕಲಿಕೆಗೆ ಯಾವುದೇ ಸಮಸ್ಯೆಯಾಗದೇ ವಿದ್ಯಾರ್ಥಿಗಳು ಕಾಲೇಜಿನ ಶೈಕ್ಷಣಿಕ ವಾತಾವರಣಕ್ಕೆ ಹತ್ತಿರವಾಗಬೇಕಾದರೆ ಕಾಲೇಜಿನ ಮೂಲಭೂತ ಸೌಕರ್ಯ ಹಾಗೂ ಪ್ರವೇಶ, ಕಿರುಪರೀಕ್ಷೆ ಮತ್ತು ಫಲಿತಾಂಶ, ಸರ್ಕಾರದಿಂದ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು. ಚಿತ್ರದುರ್ಗದ ಮಹಿಳಾ ಕಾಲೇಜು ಶೈಕ್ಷಣಿಕ ಗುಣಮಟ್ಟ ಕಾಪಾಡಿಕೊಂಡು ಬರುತ್ತಿರುವುದು ತುಂಬಾ ಸಂತೋಷದ ವಿಷಯ ಇದಕ್ಕೆ ಕಾರಣ ನಮ್ಮ ಕಾಲೇಜಿನಲ್ಲಿರುವ ನುರಿತ ಬೋಧಕ ಮತ್ತು ಬೋಧಕೇತರ ವರ್ಗ ಹಾಗೂ ಶಿಕ್ಷಣ ಪಡೆಯಲೆಂದೇ ಆಗಮಿಸುತ್ತಿರುವ ವಿದ್ಯಾರ್ಥಿಗಳು ಎಂದು ಹೇಳಿದರು.

ಶಿಕ್ಷಣದ ಅವಧಿಯಲ್ಲಿ ಜ್ಞಾನಾರ್ಜನೆಗೆ ಗಮನ ನೀಡಿ, ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅಭಿವಿನ್ಯಾಸ ಕಾರ್ಯಕ್ರಮದ ಸಂಚಾಲಕ ಪ್ರೊ.ಬಿ.ಮಂಜುನಾಥ ಮಾತನಾಡಿ, ವಿದ್ಯಾರ್ಥಿಗಳು ಸದಾ ಕಾಲ ಜ್ಞಾನಕ್ಕೆ ಪ್ರತಿನಿಧ್ಯ ನೀಡಬೇಕು. ಇದಕ್ಕೆ ಶಿಸ್ತು ಮುಖ್ಯ ಈ ಹಿನ್ನೆಲೆಯಲ್ಲಿ ಇಂತಹ ಅಭಿವಿನ್ಯಾಸ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ಡಾ.ಸಿ.ಚನ್ನಕೇಶವ. ಡಾ.ಶಿವಣ್ಣ, ಡಾ.ಸಿದ್ದಪ್ಪ, ಪ್ರೊ.ಹೆಚ್.ಶಕುಂತಲ, ಪ್ರೊ.ಆರ್.ಲೀಲಾವತಿ, ಡಾ.ಪಿ.ಎನ್.ಮಧುಸೂದನ, ಎಂ.ಗಿರೀಶ್, ಕ್ರೀಡಾ ಸಂಚಾಲಕರಾದ ಶಿವಪ್ರಸಾದ್.ಆರ್, ಗ್ರಂಥಪಾಲಕರಾದ ಕುಮಾರಸ್ವಾಮಿ.ಬಿ.ಹೆಚ್, ಬಸಣ್ಣಗೌಡ.ಕೆ.ಎನ್, ಸುಜಲ ಭಾಗವಹಿಸಿದ್ದರು.

---

# ಜಾನುವಾರುಗಳ ಪ್ರಾಣ ರಕ್ಷಣೆಯಾಗಿ ಲಸಿಕೆ



» ಚಳ್ಳಕೆರೆ

ಸರ್ವೆಸಾಮಾನ್ಯವಾಗಿ ಬಿಸಿಲಿನ ಬೇಗೆಯಲ್ಲಿ ನರಳುವ ಜಾನುವಾರುಗಳಿಗೆ ಕಾಲುಬಾಯಿ ಜ್ವರ ಕಾಣಿಸಿಕೊಂಡು ಅವುಗಳ ಪ್ರಾಣಕ್ಕೆ ಅಪಾಯವನ್ನುಂಟು ಮಾಡುವ ಹಿನ್ನೆಲೆಯಲ್ಲಿ ರಾಷ್ಟ್ರೀಯ ಪ್ರಾಣಿ ರೋಗ ನಿಯಂತ್ರಣ ಕಾರ್ಯಕ್ರಮದಡಿ ತಾಲ್ಲೂಕಿನಾದ್ಯಂತ ಜಾನುವಾರುಗಳಿಗೆ ಕಾಲುಬಾಯಿ ಜ್ವರ ನಿಯಂತ್ರಣ ಲಸಿಕೆಯನ್ನು ಹಾಕಲಾಗುತ್ತಿದೆ ಎಂದು ಪಶುವೈದ್ಯ ಇಲಾಖೆಯ ಸಹಾಯಕ ನಿರ್ದೇಶಕ ರೇವಣ ತಿಳಿಸಿದರು.

ಅವರು, ಈ ಬಗ್ಗೆ ಮಾಹಿತಿ ನೀಡಿ, ಕಳೆದ 2019ರಿಂದ ತಾಲ್ಲೂಕಿನಾದ್ಯಂತ ಕಾಲುಬಾಯಿ ಜ್ವರ ಲಸಿಕೆಯನ್ನು ಉಚಿತವಾಗಿ ಹಾಕುವ ಕಾರ್ಯಕ್ರಮ ಜಾರಿಯಾಗಿದೆ. ಸುಮಾರು 5 ವರ್ಷಗಳ ಅವಧಿಯಲ್ಲಿ ಲಕ್ಷಾಂತರ ಜಾನುವಾರುಗಳ ಪ್ರಾಣವನ್ನು ಲಸಿಕೆ ನೀಡುವ ಮೂಲಕ ರಕ್ಷಣೆ ಮಾಡಲಾಗಿದೆ.ಪ್ರಸ್ತುತ ತಾಲ್ಲೂಕಿನಾದ್ಯಂತ ಎತ್ತು, ಹೋರಿ, ಎಮ್ಮೆ, ಹಂದಿ ಸೇರಿ ಸುಮಾರು 70 ಸಾವಿರಕ್ಕೂ ಹೆಚ್ಚು ಜಾನುವಾರುಗಳಿವೆ. ಚಳ್ಳಕೆರೆ ನಗರದ ಪಶುವೈದ್ಯ ಇಲಾಖೆ ಆಸ್ಪತ್ರೆಯೂ ಸೇರಿದಂತೆ ತಾಲ್ಲೂಕಿನ ವಿವಿಧ ಪಶುವೈದ್ಯ ಕೇಂದ್ರಗಳಲ್ಲಿ ಇಲಾಖೆ ಸಿಬ್ಬಂದಿ ಉಚಿತವಾಗಿ ಈ ಲಸಿಕೆ ನೀಡಲಾಗುತ್ತಿದೆ. ಸರ್ಕಾರದ ನಿರ್ದೇಶನದಂತೆ ಸೆ.26ರಿಂದ ಆ.25ರ ವರೆಗೂ ಈ ಅಭಿಯಾನ ಕಾರ್ಯಕ್ರಮ ಒಂದು ತಿಂಗಳ ಕಾಲ ನಡೆಯಲಿದೆ.ಈ ಅವಧಿಯಲ್ಲಿ ಪಶುವೈದ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಮನೆ, ಮನೆಗೂ ತೆರಳಿ ವಿಚಾರಣೆ ನಡೆಸಿ ಮನೆಯಲ್ಲಿ ಜಾನುವಾರುಗಳಿದ್ದಲ್ಲಿ ಕೂಡಲೇ ಅವುಗಳಿಗೆ ಉಚಿತವಾಗಿ ಕಾಲುಬಾಯಿ ಜ್ವರ ನಿರೋಧಕ ಲಸಿಕೆಯನ್ನು ನೀಡಲಾಗುತ್ತದೆ. ಸಾರ್ವಜನಿಕರು ಮತ್ತು ರೈತರು ತಮ್ಮ ವ್ಯಾಪ್ತಿಯಲ್ಲಿ ಜಾನುವಾರುಗಳು ಇದ್ದರೆ ದೂರವಾಣಿ ಮೂಲಕ ಇಲಾಖೆಯ ಗಮನಕ್ಕೆ ತಂದರೆ ಕೂಡಲೇ ಲಸಿಕೆ ಹಾಕಲಾಗುವುದು ಎಂದರು. ಈ ಅಭಿಯಾನಕ್ಕೆ ಎಲ್ಲರೂ ಕೈಜೋಡಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದ್ಧಾರೆ.

---

# ಏಕಬಳಕೆ ಪ್ಲಾಸ್ಟಿಕ್ ಕುರಿತು ಸಾರ್ವಜನಿಕರಿಗೆ ಅರಿವು

» ಚಿತ್ರದುರ್ಗ

ಚಿತ್ರದುರ್ಗ ನಗರದ ಐತಿಹಾಸಿಕ ಸ್ಥಳವಾದ ಚಂದ್ರವಳ್ಳಿ ಕೆರೆಯ ಸುತ್ತಮುತ್ತ ಪ್ರದೇಶದಲ್ಲಿ ಬುಧವಾರ ಸ್ವಚ್ಛತಾ ಹಿ ಸೇವಾ, ಸ್ವಚ್ಛತೆಯೇ ಸೇವೆ ಆಂದೋಲನದ ಅಂಗವಾಗಿ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಪ್ರಯುಕ್ತ ಸ್ವಚ್ಛತಾ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಂಡು, ಸಾರ್ವಜನಿಕರಿಗೆ ಏಕಬಳಕೆ ಪ್ಲಾಸ್ಟಿಕ್ ಕುರಿತು ಅರಿವು ಮೂಡಿಸಲಾಯಿತು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಮಾತನಾಡಿ, ಜಿಲ್ಲೆಯಲ್ಲಿ ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ಸ್ವಚ್ಛತಾ ಹಿ ಸೇವಾ/ಸ್ವಚ್ಛತೆಯೇ ಸೇವೆ ಆಂದೋಲನ 2023ರ ಸೆಪ್ಟೆಂಬರ್ 15 ರಿಂದ



ಅಕ್ಟೋಬರ್ 2 ರವರೆಗೆ ವಿಶೇಷ ಆಂದೋಲನ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ವಿಶ್ವ ಪ್ರವಾಸೋದ್ಯಮ ದಿನಾಚರಣೆ ಅಂಗವಾಗಿ ಜಿಲ್ಲೆಯ ಐತಿಹಾಸಿಕ ಪ್ರವಾಸಿ ತಾಣಗಳಲ್ಲಿ ಸ್ವಚ್ಛತಾ ಶ್ರಮದಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಅಕ್ಟೋಬರ್ 1 ರಂದು ಏಕಕಾಲದಲ್ಲಿ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಏಕ್ ತಾರೀಖ್ ಏಕ್ ಗಂಟ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಹೆಚ್ಚು ಜನಜಂಗುಳಿ ಇರುವ ಸ್ಥಳಗಾದ ಬಸ್ ನಿಲ್ದಾಣ, ಸಮುದಾಯ ಭವನ, ಪ್ರವಾಸಿ ತಾಣಗಳು, ಸಾರ್ವಜನಿಕ ಸ್ಥಳಗಳಲ್ಲಿ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು. ಶ್ರಮದಾನ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರವಿಶಂಕರ್ ರೆಡ್ಡಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ಅಧಿಕಾರಿಗಳು ಇದ್ದರು.

---

## ಪ್ರಮುಖ ಸುದ್ದಿ

### ಆಯುಷ್ಮಾನ್ ಭವ ಅಂದೋಲನದಡಿಯಲ್ಲಿ ಆರೋಗ್ಯ ತಪಾಸಣೆ

# ಎಲ್ಲರೂ ಆಯುಷ್ಮಾನ್ ಕಾರ್ಡ್ ಪಡೆಯಿರಿ: ಡಿಎಚ್ಓ

» ಚಿತ್ರದುರ್ಗ

ಆರೋಗ್ಯ ಸುರಕ್ಷತಾ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಜಿಲ್ಲೆಯಲ್ಲಿ ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 2 ರವರೆಗೆ ಆರೋಗ್ಯ ಇಲಾಖೆಯಿಂದ ಆಯುಷ್ಮಾನ್ ಭವ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದ್ದು, ಜಿಲ್ಲೆಯ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್.ರಂಗನಾಥ್ ಹೇಳಿದರು.

ನಗರದ ಐತಿಹಾಸಿಕ ಕೋಟೆ ಆವರಣದ ಬನಶಂಕರಿ ದೇವಸ್ಥಾನದ ಬಳಿ ಬುಧವಾರ ಜಿಲ್ಲಾ ಆರೋಗ್ಯ ಇಲಾಖೆ, ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಇವರ ಸಹಯೋಗದೊಂದಿಗೆ ಆಯುಷ್ಮಾನ್ ಭವ ಕಾರ್ಯಕ್ರಮದ ಅಡಿಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಅವರು ಮಾತನಾಡಿದರು.



ಆರೋಗ್ಯ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸಲು ಆಯುಷ್ಮಾನ್ ಭವ ಆಂದೋಲನದಲ್ಲಿ ವಿವಿಧ ಕಾರ್ಯ ಚಟುವಟಿಕೆಗಳನ್ನು ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಆಯೋಜಿಸಲಾಗುತ್ತಿದೆ. ಜಿಲ್ಲೆಯ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಕ್ರಿಯವಾಗಿ ನಡೆಯಲಿದೆ. ಆಂದೋಲನದ ಅಂಗವಾಗಿ ಆಯುಷ್ಮಾನ್ ಕಾರ್ಡ್‌ಗಳ ನೋಂದಣಿ ಮತ್ತು ವಿತರಣೆ ಮಾಡಲಾಗುತ್ತದೆ. ಈ ಕಾರ್ಯಕ್ರಮದಡಿಯಲ್ಲಿ ಮನೆ ಬಾಗಿಲಿಗೆ ಆಯುಷ್ಮಾನ್ ಕಾರ್ಡ್‌ಗಳನ್ನು ನೀಡಲಾಗುವುದು.

ಅಲ್ಲದೆ ಅಸಾಂಕ್ರಾಮಿಕ ರೋಗಗಳ ಪತ್ತೆ ಹಾಗೂ ತಪಾಸಣೆ, ಕ್ಷಯ ರೋಗ, ಮಲೇರಿಯಾ ಡೆಂಗ್ಯೂ, ಚಿಕನ್ ಗುನ್ಯಾ, ಕೀಟ ಜನ್ಯ ರೋಗಗಳು, ಕುಷ್ಠರೋಗ ಹಾಗೂ ಇತರೆ ಸಾಂಕ್ರಾಮಿಕ ರೋಗಗಳ ತಪಾಸಣಾ ಶಿಬಿರ, ತಾಯಿ ಮತ್ತು ಮಕ್ಕಳ ಆರೋಗ್ಯ ಹಾಗೂ ಪೌಷ್ಟಿಕ ಆರೋಗ್ಯ ಶಿಬಿರ, ಸಿಕ್ಕಲ್ ಸೆಲ್ ಅನಿಮೀಯಾ ತಪಾಸಣೆ (ಬುಡಕಟ್ಟು ಜನಾಂಗದವರಿಗೆ) ಇತರೆ ಪ್ರದೇಶದಲ್ಲಿ ಕಣ್ಣಿನ ತಪಾಸಣೆ ಹಾಗೂ ಎಲ್ಲಾ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರಿಂದ ತಪಾಸಣೆ ಮತ್ತು ಚಿಕಿತ್ಸೆ ನೀಡಲಾಗುವುದು ಎಂದರು.

ಮಹಾತ್ಮ ಗಾಂಧೀಜಿಯವರ ಜನ್ಮ ದಿನವಾದ ಅಕ್ಟೋಬರ್ 2ರಂದು ಜಿಲ್ಲೆಯ ಎಲ್ಲ ಗ್ರಾಮ ಹಾಗೂ ನಗರ ಆರೋಗ್ಯ ನೈರ್ಮಲ್ಯ ಸಮಿತಿ ಸದಸ್ಯರು ಮತ್ತು ಆರೋಗ್ಯ ರಕ್ಷಾ ಸಮಿತಿಯ ಸದಸ್ಯರು ಆರೋಗ್ಯ ಇಲಾಖೆಯ ಯೋಜನೆಗಳ ಕುರಿತು ಅರಿವು ಮೂಡಿಸುವರು. ಸಾರ್ವಜನಿಕರು ಈ ಮೇಳದ ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಚಂದ್ರಶೇಖರ್ ಕಂಬಳಿಮಠ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ನಾಗರಾಜ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀಧರ್, ಬುದ್ಧನಗರ ಆರೋಗ್ಯ ಕೇಂದ್ರದ ಎಲ್ಲ ಆರೋಗ್ಯ ಸಿಬ್ಬಂದಿಗಳು, ಯೋಗ ಶಿಕ್ಷಕರು, ಸಾರ್ವಜನಿಕರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T